

MAG(2) PRB/CR/70/2022-23 REG NO: KARKAN27951

# ಮುಂಜಾನೆ ವಾರ್ತೆ

ಇ-ಪೇಪರ್: www.munjaneevartheepaper.com

MUNJANE VARTHE

EDITOR: H.L.AMARANATH

ಸಂಪಾದಕ: ಹೆಚ್.ಎಲ್ ಅಮರನಾಥ್

ಕನ್ನಡ ದಿನಪತ್ರಿಕೆ

ಜಾಹೀರಾತಿಗಾಗಿ ಸಂಪರ್ಕಿಸಿ 9663122276

website: munjanevarthe.com

Volume: 02 Issue: 101 | ಸಂಪುಟ: 02 | ಸಂಚಿಕೆ: 101 | ಪುಟಗಳು: 04 | munjanevarthe | 27 MONDAY MAY 2024 | 27 ಸೋಮವಾರ ಮೇ 2024 | ₹ 2

**ಸೆರೆನ್ ಮೆಡ್ ಲೌಂಜ್ ತನ್ನ ಮೊದಲ ಕ್ಲಿನಿಕ್ ಬೆಂಗಳೂರಿನಲ್ಲಿ ಪ್ರಾರಂಭ** ವಿವರಪುಟ 02

**ಯುವಕರು ಸೇವಾ ಮನೋಭಾವನೆ ಜೀವನದ ಉಸಿರಾಗಬೇಕು** ವಿವರಪುಟ 03

**ನೀತಿ ಸಂಹಿತೆ ಉಲ್ಲಂಘನೆ: ಪ್ರೆಸಿಡೆನ್ಸಿ ಯೂನಿವರ್ಸಿಟಿ ವಿರುದ್ಧ ದೂರು** ವಿವರಪುಟ 04

# ಸರ್ಕಾರದ ವಿರುದ್ಧ ಅಶೋಕ್ ತೀವ್ರ ಆಕ್ರೋಶ

ಬೆಂಗಳೂರು: ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಎನ್ನುವುದು ಎಷ್ಟು ಹದಗೆಟ್ಟು ಹೋಗಿದೆ ಎಂದರೆ, ಗೃಹ ಸಚಿವರು ಯಾರು ಅನ್ನೋದೇ ಗೊತ್ತಾಗುತ್ತಿಲ್ಲ. ಹೆಣ್ಣು ಮಕ್ಕಳು ಶಾಲೆಗೆ ಹೋದರೆ, ಮಹಿಳೆಯರು ಕೆಲಸಕ್ಕೆ ಹೋದರೆ ಮನೆಗೆ ವಾಪಸ್ ಬರುವ ಗ್ಯಾರಂಟಿಯೇ ಇಲ್ಲ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.



ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ

ಮಾತನಾಡಿದ ಅವರು, ಶಿವರಾಮೇಗೌಡ ಎನ್ನುವ ವ್ಯಕ್ತಿ ಹೇಳುತ್ತಾನೆ, ಮೋದಿಗೆ ಹೇಳಿ ಜೆಡಿಎಸ್ -ಬಿಜೆಪಿ ಭಾಗ ಮಾಡಿಬಿಟ್ಟರೆ ನಮಗೆ ಒಳ್ಳೆಯದು ಎಂದು. ಇವರೆಂಥಾ ಚಂಡಾಳರು ಎನ್ನುವುದು ಇದರಿಂದ ಗೊತ್ತಾಗುತ್ತದೆ. ಮುಂದಿನ ವಿಧಾನಸಭಾ ಚುನಾವಣೆವರೆಗೂ ಇವರು ಒಂದಾಗಿದ್ದರೆ ನಮಗೆ ಉಳಿಗಾಲ ಇಲ್ಲ ಎನ್ನುವುದು ಅವರ ಹೆದರಿಕೆ ಎಂದು ಅವರು ಲೇವಡಿ ಮಾಡಿದ್ದಾರೆ.

ಕೆಲಸ ಆಗಬೇಕಾದರೆ ಕೈ ಎತ್ತು, ಕೆಲಸ ಆದ ಮೇಲೆ ಚೂರಿ ಹಾಕು. ಇದೇ ಕಾಂಗ್ರೆಸ್‌ನ ನೀತಿ. ಇವರು ಹಿಂದಿನ ಮೈತ್ರಿ ಸರ್ಕಾರದ ವೇಳೆ ಕುಮಾರಸ್ವಾಮಿಯವರ ಬೆನ್ನಿಗೆ ಚೂರಿ ಹಾಕಿದ್ದರು. ನಾನು ಹದಿನಾಲ್ಕು ತಿಂಗಳು ದುಷ್ಟರ ಸಹವಾಸ ಮಾಡಿದ್ದೆ. ನನ್ನನ್ನು ಕ್ಲರ್ಕ್, ಜವಾನನ ರೀತಿ ನಡೆಸಿಕೊಂಡರು ಎಂದು ಅವರು ಆಕ್ರೋಶ ಹೊರಹಾಕಿದ್ದಾರೆ.

ಕಾಂಗ್ರೆಸ್ ಸರ್ಕಾರ ಎಲ್ಲಾ ಕಡೆ ಲೂಟಿ ಮಾಡುತ್ತಿದೆ. ಈಗ ಬಿಡಿಎ ಕಾಂಪ್ಲೆಕ್ಸ್‌ಗಳನ್ನು ಮಾರಾಟಕ್ಕೆ ಇಟ್ಟಿದೆ. ಹಿಂದೆ ಲಕ್ಷ್ಮಣ್‌ರಾವ್ ಅವರಂಥ ಮಹಾನುಭಾವರು ಇವನ್ನೆಲ್ಲ ಕಾಪಾಡಿಕೊಂಡು ಬಂದಿದ್ದರು. ಸರ್ಕಾರದಲ್ಲಿ ಹಣ ಇಲ್ಲ. ಅವರ ವರಿಷ್ಠರಿಗೆ ಕಪ್ಪ ಕೊಡಲು ಇಲ್ಲಿ ಲೂಟಿ ಮಾಡಲು ಹೊರಟಿದ್ದಾರೆ ಎಂದು ಅವರು ಆರೋಪಿಸಿದ್ದಾರೆ.

# ಹುಲಿದಾಳಿಗೆ ಮಹಿಳೆ ಬಲಿ

ಮೈಸೂರು: ಮೇಕೆ ಮೇಯಿಸುತ್ತಿದ್ದಾಗ ಹುಲಿ ದಾಳಿಗೆ ಮಹಿಳೆ ಬಲಿಯಾಗಿರುವ ಘಟನೆ ಮೈಸೂರಿನ ಹೆಚ್.ಡಿ.ಕೋಟೆ ತಾಲೂಕಿನಲ್ಲಿ ನಡೆದಿದೆ.

ಹುಲಿ ದಾಳಿಗೆ ಎನ್.ಬೇಗೂರು ಸಮೀಪದ ಮಾಳದ ಹಾಡಿ ನಿವಾಸಿ ಚಿಕ್ಕಿ ಹೆಸರಿನ ರೈತ ಮಹಿಳೆ ಮೃತಪಟ್ಟಿದ್ದಾರೆ. ಮೂರ್ಬಾಂದ್ ಬೆಟ್ಟದ ಸಮೀಪ ಘಟನೆ ನಡೆದಿದೆ.

ಮೇಕೆ ಮೇಯಿಸುತ್ತಿದ್ದಾಗ ಹಠಾತ್ ಮಹಿಳೆ ಮೇಲೆ ಹುಲಿ ದಾಳಿ ನಡೆಸಿ ಕೊಂದಿದೆ. ಮಹಿಳೆಯನ್ನು ಕೊಂದು ದೇಹವನ್ನು 200 ಮೀ ದೂರ ಕಾಡಿನೊಳಗೆ ಹುಲಿ ಎಳೆದೊಯ್ದಿದೆ ಎನ್ನಲಾಗಿದೆ. ವಿಷಯ ತಿಳಿದು ಘಟನಾ ಸ್ಥಳಕ್ಕೆ ಎನ್.ಬೇಗೂರು ಅರಣ್ಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಡ್ರಗ್ಸ್ ದಂಧೆ ಹೆಚ್ಚಲು ಬಿಜೆಪಿ ಕಾರಣ

ಬೆಂಗಳೂರು: ನಗರದಲ್ಲಿ ಡ್ರಗ್ಸ್ ದಂಧೆ ಹೆಚ್ಚಾಗಲು ಹಿಂದಿನ ಬಿಜೆಪಿ ಆಡಳಿತವೇ ಕಾರಣ ಎಂದು ಸಚಿವ ರಾಮಲಿಂಗಾರೆಡ್ಡಿ ಆರೋಪಿಸಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದ್ದಾರೆ. ಈ ವೇಳೆ ಬೆಂಗಳೂರು ಉಡ್ತಾ ಬೆಂಗಳೂರು ಆಗ್ತಿದೆ ಎಂಬ ಬಿಜೆಪಿ ನಾಯಕರ ಆರೋಪಕ್ಕೆ ತಿರುಗೇಟು ನೀಡಿದ್ದಾರೆ. ನಗರದಲ್ಲಿ ಡ್ರಗ್ಸ್ ದಂಧೆ ಹೆಚ್ಚಾಗಿದೆ. ಇದಕ್ಕೆ ಹಿಂದಿನ ಬಿಜೆಪಿ ಆಡಳಿತವೇ ಕಾರಣ. ನೈತಿಕ ಪೊಲೀಸ್‌ಗಿರಿ ಇವರ ಪಕ್ಷದವರೇ ಮಾಡ್ತಾ ಇದ್ದಿದ್ದು. ಇವರ ದುರ್ಬಲ ಆಡಳಿತದಿಂದಲೇ ಎಲ್ಲವೂ ಆಗಿದ್ದು ಎಂದು ಅವರು ಕಿಡಿಕಾರಿದ್ದಾರೆ.

ನಾನೂ ಸಹ ಗೃಹ ಸಚಿವನಾಗಿದ್ದೆ, ಈಗ ಪರಮೇಶ್ವರ್ ಇದ್ದಾರೆ. ಇಲಾಖೆಯನ್ನು ಬಹಳ ಚೆನ್ನಾಗಿ ನಡೆಸಿಕೊಂಡು ಹೋಗ್ತಿದ್ದಾರೆ. ಕಳೆದ ನಾಲ್ಕು ವರ್ಷದಲ್ಲಿ ಬಿಜೆಪಿ ಏನು ಮಾಡಿದೆ? ಈಗ ನಮ್ಮ ಸರ್ಕಾರ ಕಟ್ಟುನಿಟ್ಟಿನ ಕ್ರಮ ತೆಗೆದುಕೊಂಡಿದೆ ಎಂದು ಅವರು ಹೇಳಿದ್ದಾರೆ.

# ಮೃತ ಮಕ್ಕಳ ಶೈಕ್ಷಣಿಕ ಜವಾಬ್ದಾರಿ ಹೊತ್ತ ಶಾಸಕ

ಚಿಕ್ಕಬಳ್ಳಾಪುರ: ಹಾಸನದ ಬಳಿ ಭಾನುವಾರ ಬೆಳಗ್ಗೆ ಸಂಭವಿಸಿದ ಕಾರು ಅಪಘಾತದಲ್ಲಿ ಆರು ಮಂದಿ ದಾರುಣವಾಗಿ ಸಾವನ್ನಪ್ಪಿದ್ದರು. ಮೃತರ ಇಬ್ಬರು ಮಕ್ಕಳ ಶೈಕ್ಷಣಿಕ ಜವಾಬ್ದಾರಿಯನ್ನು ಶಾಸಕ ಪ್ರದೀಪ್ ಈಶ್ವರ್ ಹೊತ್ತುಕೊಂಡಿದ್ದಾರೆ.

ಮೃತರು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲೂಕಿನ ಕಾರಹಳ್ಳಿ ಗ್ರಾಮದ ನಾರಾಯಣಪ್ಪ, ಸುನಂದ ಹಾಗೂ ನೇತ್ರ (ಸುನಂದಾರ ಸಹೋದರಿ), ಆಕೆಯ ಗಂಡ ರವಿಕುಮಾರ್ ಸೇರಿದಂತೆ ಇವರ ಎರಡು ವರ್ಷದ ಮಗ ಚೇತನ್ ಹಾಗೂ ಕಾರು ಚಾಲಕ ಚಿಕ್ಕಬಳ್ಳಾಪುರ ತಾಲೂಕಿನ ಕೊಂಡೇನಹಳ್ಳಿ ಗ್ರಾಮದ ಗುಣಶೇಖರ್ ಮೃತ ದುರ್ದೈವಿಗಳಾಗಿದ್ದಾರೆ.

ಮೃತ ಸುನಂದ ಹಾಗೂ ನೇತ್ರ ಇಬ್ಬರೂ ಕೂಡ ಅಕ್ಕತಂಗಿಯರಾಗಿದ್ದು, ಇವರ ತವರು ಮನೆ ಚಿಕ್ಕಬಳ್ಳಾಪುರ ತಾಲೂಕಿನ ಚಿಗಟೇನಳ್ಳಿ ಗ್ರಾಮ ಆಗಿತ್ತು. ಮೃತ ನೇತ್ರ ಹಾಗೂ ರವಿಕುಮಾರ್ ದಂಪತಿಗೆ ಮೂರು ಜನ ಮಕ್ಕಳಿದ್ದಾರೆ. ಅಪಘಾತದಲ್ಲಿ ಮಗ ಚೇತನ್, ತಂದೆ-ತಾಯಿ ಜೊತೆ ಮೃತಪಟ್ಟಿದ್ದಾನೆ. ಮಕ್ಕಳಾದ ಪಲ್ಲವಿ ಹಾಗೂ ಪೂರ್ಣಿಮಾರನ್ನ ತವರು ಮನೆ ಚಿಗಟೇನಹಳ್ಳಿಯಲ್ಲಿ ಬಿಟ್ಟು ಹೋಗಿದ್ದರು.

ವಿಷಯ ತಿಳಿದು ಚಿಕ್ಕಬಳ್ಳಾಪುರ ಕ್ಷೇತ್ರದ ಶಾಸಕ ಪ್ರದೀಪ್ ಈಶ್ವರ್ ಚಿಗಟೇನಹಳ್ಳಿ ಗ್ರಾಮದ ನೇತ್ರಾರ ತವರು ಮನೆಗೆ ಭೇಟಿ ನೀಡಿ ಮಕ್ಕಳಿಬ್ಬರನ್ನು ಸಂತೈಸಿದ್ದಾರೆ. ಈ ವೇಳೆ ಮೃತರ ಇಬ್ಬರು ಮಕ್ಕಳ ಶೇವಣಿ ಇಡುವ ಭರವಸೆ ಹಾಗೂ ಸರ್ಕಾರದಿಂದ ಎರಡು ಲಕ್ಷ ಪರಿಹಾರ ಕೊಡಿಸುವುದಾಗಿ ಶಾಸಕ ಪ್ರದೀಪ್ ಈಶ್ವರ್ ಭರವಸೆ ನೀಡಿದ್ದಾರೆ.



ರಾಜ್ಯಾಧ್ಯಕ್ಷರಾದ ಶ್ರೀ ವಿಜಯೇಂದ್ರ ಯಡಿಯೂರಪ್ಪ ಅವರು ಇಂದು ಚಿಕ್ಕಮಗಳೂರಿನಲ್ಲಿ ನಡೆದ ವಿಧಾನ ಪರಿಷತ್‌ನ ನೈಋತ್ಯ ಪದವೀಧರರ ಮತ್ತು ಶಿಕ್ಷಕರ ಕ್ಷೇತ್ರದ ಚುನಾವಣಾ ಮತದಾರರ ಸಭೆಯಲ್ಲಿ ಪಾಲ್ಗೊಂಡು ಅಭ್ಯರ್ಥಿಗಳ ಪರ ಮತ ಯಾಚಿಸಿದರು. ಈ ಸಂದರ್ಭದಲ್ಲಿ ರಾಜ್ಯ ಪ್ರಧಾನ ಕಾರ್ಯದರ್ಶಿಗಳಾದ ಶ್ರೀ ಸುನಿಲ್ ಕುಮಾರ್, ನಿಕಟಪೂರ್ವ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಗಳಾದ ಶ್ರೀ ಸಿ. ಟಿ. ರವಿ, ಮಾಜಿ ಸಚಿವರಾದ ಶ್ರೀ ಕೋಟ ಶ್ರೀನಿವಾಸ್ ಪೂಜಾರಿ, ನೈಋತ್ಯ ಪದವೀಧರರ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾದ ಡಾ. ಧನಂಜಯ ಸರ್ಜಿ, ಶಿಕ್ಷಕರ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿಯಾದ ಶ್ರೀ ಭೋಜೇಗೌಡ, ಶಾಸಕರು, ಪರಿಷತ್ ಸದಸ್ಯರು, ಪದಾಧಿಕಾರಿಗಳು ಮತ್ತು ಪ್ರಮುಖರು ಉಪಸ್ಥಿತರಿದ್ದರು.

# 26 ಕೋಟಿ ರೂ. ನಗದು ವಶ

ಮುಂಬೈ: ಆದಾಯ ತೆರಿಗೆ ಇಲಾಖೆ ನಾಸಿಕ್‌ನಲ್ಲಿರುವ ಪ್ರಸಿದ್ಧ ಜುವೆಲ್ಲರಿ ಅಂಗಡಿ ಮೇಲೆ ದಾಳಿ ನಡೆಸಿ 26 ಕೋಟಿ ರೂ. ನಗದು ಹಣವನ್ನು ಜಪ್ತಿ ಮಾಡಿದೆ. ಅಕ್ರಮ ವಹಿವಾಟು ನಡೆಸಿದ ಆರೋಪದ ಮೇಲೆ ಸುರಾನಾ ಜ್ಯುವೆಲರ್ಸ್ ಮೇಲೆ ದಾಳಿ ನಡೆಸಿದೆ. ಈ ವೇಳೆ 26 ಕೋಟಿ ರೂ. ನಗದು, 90 ಕೋಟಿ ರೂ. ಮೌಲ್ಯದ ಲೆಕ್ಕಕ್ಕೆ ಸಿಗದ ಸಂಪತ್ತಿನ ದಾಖಲೆಗಳನ್ನು ವಶಪಡಿಸಿಕೊಂಡಿದೆ.

ನಗದು ಹಣವನ್ನು ಹಲವು ಚೀಲಗಳಲ್ಲಿ ತುಂಬಿ ಇಡಲಾಗಿತ್ತು. ಅಧಿಕಾರಿಗಳು ಕಚೇರಿಗೆ ತಂದು ಜೋಡಿಸುತ್ತಿರುವ ದೃಶ್ಯ ಸಾಮಾಜಿಕ ಜಾಲತಾಣದಲ್ಲಿ ಈಗ ಹರಿದಾಡುತ್ತಿದೆ.

## ಬ್ರ್ಯಾಂಡ್ ಬೆಂಗಳೂರು

# ಅಲ್ಲ ಲೂಟಿ ಬೆಂಗಳೂರು

ಬೆಂಗಳೂರು: ಬ್ರ್ಯಾಂಡ್ ಬೆಂಗಳೂರು ಹೆಸರಲ್ಲಿ ಲೂಟಿ ನಡೀತಿದೆ. ಇದು ಬ್ರ್ಯಾಂಡ್ ಬೆಂಗಳೂರು ಅಲ್ಲ ಲೂಟಿ ಬೆಂಗಳೂರು ಎಂದು ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಡಿಕೆಶಿ ವಿರುದ್ಧ ವಾಗ್ದಾಳಿ ನಡೆಸಿದರು.

ಬೆಂಗಳೂರಿನ ಜೆಪಿ ಭವನದಲ್ಲಿ ನಡೆದ ಬಿಜೆಪಿ-ಜೆಡಿಎಸ್ ಸಮನ್ವಯ ಸಭೆಯಲ್ಲಿ ಮಾತಾಡಿದ ಕುಮಾರಸ್ವಾಮಿ, ಎರಡು ಮೂರು ಮಳೆಗೇ ಬೆಂಗಳೂರಿನಲ್ಲಿ ಮನೆಗಳಿಗೆ ನೀರು ತುಂಬಿಕೊಂಡಿದೆ. ಬಿಡಿಎನಲ್ಲಿ ಮೊನ್ನೆ ಕ್ಲೋಸ್ಡ್ ಡೋರ್ ಮೀಟಿಂಗ್ ಮಾಡಿದ್ದಾರಂತೆ. ಬಹಳ ರಹಸ್ಯವಾಗಿ ಸಭೆ ಮಾಡಿದ್ದಾರಂತೆ. ಬೆಂಗಳೂರಿಗೆ ಇವರ ಕೊಡುಗೆ ಏನು? ಲೂಟಿ ಅಷ್ಟೇ ಎಂದು ಡಿಕೆಶಿ ಹೆಸರೇಳದೆ ಕಿಡಿಕಾರಿದರು.

ಈ ಸರ್ಕಾರ ಬಂದ ನಂತರ ಬೆಂಗಳೂರಿನಲ್ಲಿ, ರಾಜ್ಯದಲ್ಲಿ ಒಂದೂ ಹೊಸ ಅಭಿವೃದ್ಧಿ ಆಗಿಲ್ಲ. ಅಕ್ಕಿ ಕೊಡೋ ಯೋಗ್ಯತೆ ಇಲ್ಲ. ಐದು ಕೆಜಿ ಅಕ್ಕಿಯ 170 ರೂ. ಹಣವನ್ನು ಮೂರು ತಿಂಗಳಿಂದ ಕೊಟ್ಟಿಲ್ಲ. ಹಾಲು ಉತ್ಪಾದಕರಿಗೆ ಪ್ರೋತ್ಸಾಹ ಧನ ಕೊಟ್ಟಿಲ್ಲ. ಬಿತ್ತನೆ ಬೀಜದ ಬೆಲೆ 70% ಏರಿಕೆ ಮಾಡಿದ್ದಾರೆ. ಗೊಬ್ಬರ ಸಿಕ್ತಿಲ್ಲ. ಇವತ್ತು ರೈತರು ಹಲವು ಸಮಸ್ಯೆ ಎದುರಿಸುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಳೆದ ಪರಿಷತ್ ಚುನಾವಣೆಯಲ್ಲಿ ಜೆಡಿಎಸ್‌ನಲ್ಲಿದ್ದ ನಾಗಮಂಗಲದ ಮಹಾನುಭಾವ, ತಾನು ಅಭ್ಯರ್ಥಿ ಆಗಬೇಕು ಅಂತಾ ಗೊಂದಲ ಮಾಡಿದ್ದ. ಆಗ ನಮ್ಮಲ್ಲೇ ಇದ್ದ ದೇವೇಗೌಡ ಟಿಕೆಟ್ ಸಿಗುತ್ತೋ ಇಲ್ವೋ ಅಂತಾ ಬಿಜೆಪಿ ಸೇರಿದ್ರಾ? ನಂತರ ಆ ಮಹಾನುಭಾವನೂ ಬಿಜೆಪಿ ಹೋದ ಎಂದು ಮಾಜಿ ಸಂಸದ ಎಲ್.ಆರ್.ಶಿವರಾಮೇಗೌಡ ವಿರುದ್ಧ ಪರೋಕ್ಷವಾಗಿ ಕಿಡಿಕಾರಿದರು.

# ಕರಾವಳಿ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್

ಬೆಂಗಳೂರು: ಅರಬ್ಬೀ ಸಮುದ್ರದಲ್ಲಿ ಮುಂಗಾರು ಮಾರುತಗಳು ಬೀಸುತ್ತಿರುವ ಪರಿಣಾಮ ಮುಂದಿನ ಐದು ದಿನಗಳ ಕಾಲ ಪೂರ್ವ ಮುಂಗಾರು ಮಳೆ ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ ಜಿಲ್ಲೆಗಳಲ್ಲಿ ಸುರಿಯಲಿದೆ. ಇನ್ನು ಜೂನ್ 6 ಅಥವಾ 7 ರಂದು ರಾಜ್ಯಕ್ಕೆ ಮುಂಗಾರು ಪ್ರವೇಶಿಸಲಿದೆ ಎಂದು ಬೆಂಗಳೂರು ಹವಾಮಾನ ಕೇಂದ್ರ ಮಾಹಿತಿ ನೀಡಿದೆ.

ಜೊತೆಗೆ ಐದು ದಿನಗಳ ಕಾಲ ಕರಾವಳಿ ಜಿಲ್ಲೆಗಳಲ್ಲಿ ಗಾಳಿ ಗಂಟೆಗೆ 30 ರಿಂದ 40 ಕಿಲೋಮೀಟರ್ ವೇಗದಲ್ಲಿ ಬೀಸಲಿದ್ದು, ಯೆಲ್ಲೋ ಅಲರ್ಟ್ ಸಹ ಘೋಷಿಸಲಾಗಿದೆ. ಇನ್ನು ಉತ್ತರ ಒಳನಾಡಿನ ಬಾಗಲಕೋಟೆ, ಬೆಳಗಾವಿ, ಬೀದರ್, ಧಾರವಾಡ, ಗದಗ, ಹಾವೇರಿ, ಕಲಬುರಗಿ, ಕೊಪ್ಪಳ, ವಿಜಯಪುರ, ಯಾದಗಿರಿ ಜಿಲ್ಲೆಗಳಲ್ಲಿ ಸಾಮಾನ್ಯ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಮಲೆನಾಡು ಮತ್ತು ದಕ್ಷಿಣ ಒಳನಾಡಿನ ಚಿಕ್ಕಮಗಳೂರು, ಹಾಸನ, ಕೊಡಗು, ಶಿವಮೊಗ್ಗ, ಮೈಸೂರು, ಚಾಮರಾಜನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ ಜಿಲ್ಲೆಗಳ ಪ್ರತ್ಯೇಕ ಸ್ಥಳಗಳಲ್ಲಿ ಗುಡುಗು ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.



ಬೆಂಗಳೂರು ನಗರ ಮತ್ತು ಸುತ್ತಮುತ್ತ ಸ್ಥಳಗಳಲ್ಲಿ ಮುಂದಿನ 48 ಗಂಟೆಗಳ ಕಾಲ ಸಾಮಾನ್ಯವಾಗಿ ಮೋಡ ಕವಿದ ವಾತಾವರಣ ಇರಲಿದೆ. ಲಘು ಮಳೆಯಾಗುವ ಸಾಧ್ಯತೆ ಇದೆ. ಗರಿಷ್ಠ ಮತ್ತು ಕನಿಷ್ಠ ತಾಪಮಾನವು ಕ್ರಮವಾಗಿ 31 ಡಿಗ್ರಿ ಮತ್ತು 22 ಡಿಗ್ರಿ ಇರಬಹುದು ಎಂದು ಅಂದಾಜಿಸಿದೆ.

"ಸದ್ಯ ಮುಂಗಾರು ಮಾರುತಗಳು ಅರಬ್ಬೀ ಸಮುದ್ರದ ಮಾಲ್ಡೀವ್ಸ್ ಮತ್ತು ಲಕ್ಷದ್ವೀಪದ ಬಳಿ ಬೀಸುತ್ತಿವೆ. ಸದ್ಯ ರಾಜ್ಯದಲ್ಲಿ ಈ ಕಾರಣಕ್ಕೆ ಪೂರ್ವ ಮುಂಗಾರು ಮಳೆ ಮುಂದುವರೆದಿದೆ. ಕೇರಳಕ್ಕೆ ಈ ಮಾರುತಗಳು ಮೇ 28 ರಂದು ಪ್ರವೇಶಿಸುವ ಸಾಧ್ಯತೆ ಇದ್ದು, ಕರ್ನಾಟಕದ ಕರಾವಳಿಗೆ ಜೂನ್ 6 ಅಥವಾ 7 ರಂದು ಅಪ್ಪಳಿಸಲಿವೆ. ಈಗ ಉಂಟಾಗಿರುವ ಪಶ್ಚಿಮ ಬಂಗಾಳ ಬಳಿಯ ಚಂಡಮಾರುತ ರಾಜ್ಯಕ್ಕೆ ಅಪ್ಪಳಿಸುವುದಿಲ್ಲ" ಎಂದು ಬೆಂಗಳೂರು ಹವಾಮಾನ ಕೇಂದ್ರದ ವಿಜ್ಞಾನಿ ಡಾ ರಾಜುವೇಲ್ ಮಾಣಿಕ್ಕಂ ಹೇಳಿದ್ದಾರೆ.

ಈ ಬಾರಿ ವಾಡಿಕೆಗಿಂತ ಹೆಚ್ಚು ಮಳೆಯಾಗುವ ಸಾಧ್ಯತೆ ಇದ್ದು, ರಾಜ್ಯದಲ್ಲಿ ಈಗಾಗಲೇ ಪುರ್ವ ಮುಂಗಾರು ಮಳೆ ಆರಂಭವಾಗಿದೆ. ಇನ್ನು ನಿಗದಿಯಂತೆ ಜೂನ್ 6 ಅಥವಾ 7 ರಂದು ರಾಜ್ಯಕ್ಕೆ ಮುಂಗಾರು ಪ್ರವೇಶಿಸುವ ಸಾಧ್ಯತೆ ಇದೆ.

ಮುಂಜಾನೆ ವಾರ್ತೆ ಕನ್ನಡ ದಿನಪತ್ರಿಕೆ ಓದುವುದು ಈಗ ಮತ್ತಷ್ಟು ಸುಲಭ

ಜಗತ್ತಿನ ಯಾವುದೇ ಮೂಲೆಯಲ್ಲಿ ಕುಳಿತು ಮುಂಜಾನೆವಾರ್ತೆ ಓದಿ...

www.munjaneevartheepaper.com

# ರೈತರ ಪಾಲಿಗೆ ಸತ್ತು ಹೋದ ಕಾಂಗ್ರೆಸ್ ಸರಕಾರ: ನಡಹಳ್ಳಿ ಟೀಕೆ



ಬೆಂಗಳೂರು: ರಾಜ್ಯದ ಕಾಂಗ್ರೆಸ್ ಸರಕಾರವು ರೈತರ ಪಾಲಿಗೆ ಸತ್ತು ಹೋಗಿದೆ ಎಂದು ರಾಜ್ಯ ರೈತ ಮೋರ್ಚಾ ಅಧ್ಯಕ್ಷ ಎ.ಎಸ್.ಪಾಟೀಲ ನಡಹಳ್ಳಿ ಅವರು ಟೀಕಿಸಿದರು.

ನಗರದ ಬಿಜೆಪಿ ರಾಜ್ಯ ಕಚೇರಿ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಕಳೆದ ಸುಮಾರು ಒಂದು ವರ್ಷದಿಂದ ಬರಗಾಲದಿಂದ ತತ್ತರಿಸಿ ಹೋದ ರೈತರಿಗೆ ಸಹಾಯ ಮಾಡಲು ಕೇಂದ್ರ ಸರಕಾರವು ಸಾವಿರಾರು ಕೋಟಿ ರೂ. ಬರಗಾಲದ ಪರಿಹಾರಧನ ಕೊಟ್ಟಿದೆ. ಆದರೂ, ದೇವರು ಕೊಟ್ಟರೂ ಕೂಡ ಪೂಜಾರಿ ಕೊಡಲು ತಯಾರಿಲ್ಲ ಎಂಬಂತೆ ಕೇಂದ್ರ ಸರಕಾರ, ನರೇಂದ್ರ ಮೋದಿಯವರು ಬರಗಾಲದ ಮೊತ್ತವನ್ನು ಕೊಟ್ಟಿದ್ದರೂ ಅದನ್ನು ಸುಮಾರು 2 ಲಕ್ಷಕ್ಕಿಂತ ಹೆಚ್ಚು ರೈತರ ಖಾತೆಗಳಿಗೆ ಇವತ್ತಿಗೂ ನೀಡಿಲ್ಲ. ಇದು ರೈತರ ಪಾಲಿಗೆ ಸತ್ತು ಹೋದ ಸರಕಾರದಂತಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಬರಗಾಲದಿಂದ ಬೆಂದಿರುವ ರೈತರಿಗೆ ಅತ್ಯಂತ ಕಡಿಮೆ ದರದಲ್ಲಿ ಬಿತ್ತನೆ ಬೀಜವನ್ನು ವಿತರಿಸುವ ಕೆಲಸವನ್ನು ಈ ಸರಕಾರ ಮಾಡಬೇಕಿತ್ತು. ಆದರೆ, ಕಾಂಗ್ರೆಸ್ ಸರಕಾರವು ಬಿತ್ತನೆ ಬೀಜಕ್ಕೂ ಅತಿ ಹೆಚ್ಚು ದರ ವಿಧಿಸುತ್ತಿದೆ. ಇದನ್ನು ಬಿಜೆಪಿ ತೀವ್ರವಾಗಿ ಖಂಡಿಸುತ್ತದೆ ಎಂದು ತಿಳಿಸಿದರು.

ಈಗ ಮುಂಗಾರು ಸಂದರ್ಭದಲ್ಲಿ ಬೆಳೆಯುವ ಹೆಸರು, ಶೇಂಗಾ, ಉದ್ದು, ಮೆಕ್ಕೆಜೋಳ ಮೊದಲಾದವುಗಳ ದರವನ್ನು ಅತಿ ಹೆಚ್ಚು ಪ್ರಮಾಣದಲ್ಲಿ ಏರಿಸಿದ್ದಾರೆ ಎಂದು ಖಂಡಿಸಿದರು.

ಉದ್ದು ಪ್ರತಿ ಕೆಜಿಗೆ 43 ರೂ, ತೊಗರಿಗೆ 48 ರೂ., ಮೆಕ್ಕೆಜೋಳ 5 ಕೆಜಿ ಪೊಟ್ಟಣಕ್ಕೆ 24 ರೂ. ಹೆಚ್ಚಿಸಿದ್ದಾರೆ.

ಸರಕಾರ ಈ ಹಿಂದಿನ ಬಿತ್ತನೆ ಬೀಜದ ದರವನ್ನೇ ಮುಂದುವರಿಸಬೇಕು. ಬಿತ್ತನೆ ಬೀಜ, ಗೊಬ್ಬರ ಸಮರ್ಪಕವಾಗಿ ಎಲ್ಲ ರೈತರಿಗೆ ಸಿಗುವಂತೆ ನೋಡಿಕೊಳ್ಳಲು ಆಗ್ರಹಿಸಿದರು.

ಕೊಬ್ಬರಿಯನ್ನು ಎಂಎಸ್‌ಪಿ ಅಡಿ ಖರೀದಿ ಮಾಡಲು ಕೇಂದ್ರದ ನರೇಂದ್ರ ಮೋದಿಜೀ ನೇತೃತ್ವದ ಸರಕಾರ ಮುಂದಾಗಿದೆ. ಪ್ರತಿ ಕ್ವಿಂಟಲ್‌ಗೆ ಸುಮಾರು 12 ಸಾವಿರ ರೂ. ಕೊಟ್ಟು ಖರೀದಿ ಅವಕಾಶ ನೀಡಿದ್ದು, ಈ ಸರಕಾರ ಚೀಲ ಇಲ್ಲ ಎಂಬ ನೆಪ ಹೇಳುತ್ತಿದೆ. ಇದು ಅತ್ಯಂತ ನಾಚಿಕೆಗೇಡು ಎಂದು ಆಕ್ಷೇಪ ಸೂಚಿಸಿದರು.

ಈಗಾಗಲೇ ಖರೀದಿಸಿದ 35 ಸಾವಿರ ಟನ್ ಕೊಬ್ಬರಿಗೆ ಹಣವನ್ನೂ ನೀಡಿಲ್ಲ ಎಂದು ದೂರಿದರು. ರೈತರು ಹಣ ಕೇಳಿದರೆ ಕೊಬ್ಬರಿ ತೆಗೆದುಕೊಂಡು ಹೋಗುವಂತೆ ಅಧಿಕಾರಿಗಳು ದರ್ಪದಿಂದ ಮಾತನಾಡುತ್ತಿದ್ದಾರೆ ಎಂದು ಟೀಕಿಸಿದರು. ಕೊಬ್ಬರಿಗೆ ಸಂಬಂಧಿಸಿ ರೈತರಿಗೆ ಹಣ ನೀಡಬೇಕು.

ಚೀಲ ಇಲ್ಲ ಎಂಬ ಕುಂಟು ನೆಪ ಬಿಟ್ಟು ಕೊಬ್ಬರಿ ಖರೀದಿ ಮುಂದುವರಿಸಬೇಕು ಎಂದು ಆಗ್ರಹಿಸಿದರು.

ಹಿಂದೆ ಹೈನುಗಾರರಿಗೆ ನಮ್ಮ ಸರಕಾರ ಹಾಲು ಉತ್ಪಾದನೆಗೆ ಪ್ರೋತ್ಸಾಹಧನ ನೀಡುತ್ತಿತ್ತು. ಆದರೆ, ಈಗ ಹೈನುಗಾರಿಕೆಗೆ ಸಂಬಂಧಿಸಿ ಪ್ರತಿ ಲೀಟರ್‌ಗೆ 5 ರೂ. ಪ್ರೋತ್ಸಾಹಧನ ಸ್ಥಗಿತಗೊಂಡಿದೆ ಎಂದರಲ್ಲದೆ, ರೈತರಿಗೆ ಬಾಕಿ ಇರುವ 700ರಿಂದ 800 ಕೋಟಿ ಸಹಾಯಧನವನ್ನು ಕೂಡಲೇ ಬಿಡುಗಡೆ ಮಾಡುವಂತೆ ಅವರು ಒತ್ತಾಯಿಸಿದರು.

# ರಾಜ್ಯದಲ್ಲಿ ಪೊಲೀಸರಿಗೇ ರಕ್ಷಣೆ ಇಲ್ಲ: ಅರಗ ಜ್ಞಾನೇಂದ್ರ

ಬೆಂಗಳೂರು: ರಾಜ್ಯದಲ್ಲಿ ಪೊಲೀಸರಿಗೇ ರಕ್ಷಣೆ ಇಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ರಾಜ್ಯದ ಮಾಜಿ ಗೃಹ ಸಚಿವ ಅರಗ ಜ್ಞಾನೇಂದ್ರ ಅವರು ಇಂದು ತಿಳಿಸಿದರು.

ಶಿವಮೊಗ್ಗದಲ್ಲಿ ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಪೊಲೀಸರ ಬಗ್ಗೆ ಅಪರಾಧಿಗಳಿಗೆ ಗೌರವ ಇಲ್ಲ ಅಥವಾ ಭಯ ಇಲ್ಲ. ಪೊಲೀಸ್ ವ್ಯವಸ್ಥೆಯನ್ನೇ ತಮ್ಮ ರಾಜಕೀಯಕ್ಕಾಗಿ ಬಳಸಿಕೊಳ್ಳುವ ಪ್ರಯತ್ನ ಈ ಸರಕಾರದ ಕಡೆಯಿಂದ ಎಗ್ಗಿಲ್ಲದೆ ನಡೆಯುತ್ತಿದೆ ಎಂದು ಟೀಕಿಸಿದರು.



ಶುಕ್ರವಾರ ಚನ್ನಗಿರಿಯಲ್ಲಿ ನಡೆದ ಪ್ರಕರಣದಡಿ ಅಪರಾಧಿಯನ್ನು ಕರೆದುಕೊಂಡು ಬಂದಿದ್ದರು. ಲಾಕಪ್ ಡೆತ್ ಎಂದು ಹೇಳಿದ್ದಾರೆ ಎಂದು ತಿಳಿಸಿದ ಅವರು, ರಾಜ್ಯದಲ್ಲಿ ಅಪರಾಧದ ಸಂಖ್ಯೆ ಹೆಚ್ಚಳದಿಂದ ಜನರ ನೆಮ್ಮದಿ ಹಾಳಾಗುತ್ತಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಅಪರಾಧ ಪ್ರಕರಣಗಳ ಹೆಚ್ಚಳ ಕುರಿತ ಅಂಕಿ ಅಂಶಗಳನ್ನು ಅವರು ಮುಂದಿಟ್ಟರು.

ಆಡಳಿತದಲ್ಲಿ ಇರುವವರು ಬಿಗಿಯಾಗಿ ಇದ್ದಾಗ ಮಾತ್ರ ಶಾಂತ ಪರಿಸ್ಥಿತಿ ಲಭಿಸುತ್ತದೆ. ಈ ಸರಕಾರದಡಿ ವಿಧಾನಸೌಧದ ಒಳಗೇ ದೇಶವಿರೋಧಿ, ಪಾಕಿಸ್ತಾನದ ಪರ ಘೋಷಣೆ ಕೂಗಲಾಗಿತ್ತು. ಮೊನ್ನೆ ಕೊಪ್ಪದಲ್ಲೂ ಪಾಕಿಸ್ತಾನದ ಪರವಾಗಿ ಘೋಷಣೆ ಕೂಗಿದ್ದ ಪೋಸ್ಟ್ ಸಾಮಾಜಿಕ ಜಾಲತಾಣದಲ್ಲೂ ಪ್ರಕಟಗೊಂಡಿದೆ ಎಂದು ವಿವರಿಸಿದರು.

# ಜಗದ್ಗುರು ರೇಣುಕಾಚಾರ್ಯ ಯುಗಮಾನೋತ್ಸವ, ಶ್ರೀ ಜಗಜ್ಯೋತಿ ಬಸವೇಶ್ವರ ಜಯಂತ್ಯೋತ್ಸವ

ಯಲಹಂಕ : 'ಯಲಹಂಕ ವೀರಶೈವ ಲಿಂಗಾಯತ ಸಮನ್ವಯ ಸಮಿತಿ' ವತಿಯಿಂದ ಮೇ.26ರ ಭಾನುವಾರ ಸಂಜೆ 4 ಗಂಟೆಗೆ ಯಲಹಂಕ ಉಪನಗರ 5ನೇ ಹಂತದಲ್ಲಿರುವ ಶ್ರೀ ಶಿವಕುಮಾರ ಸ್ವಾಮಿಗಳ ಸಭಾಂಗಣದಲ್ಲಿ ಜಗದ್ಗುರು ರೇಣುಕಾಚಾರ್ಯರ ಯುಗಮಾನೋತ್ಸವ ಮತ್ತು ಶ್ರೀ ಜಗಜ್ಯೋತಿ ಬಸವೇಶ್ವರ ಜಯಂತ್ಯೋತ್ಸವ ಏರ್ಪಡಿಸಲಾಗಿದೆ.

ಕಾರ್ಯಕ್ರಮದ ಪ್ರಯುಕ್ತ ಯಲಹಂಕ ಮಿನಿ ವಿಧಾನಸೌಧ ಮುಂಭಾಗದಲ್ಲಿ ಇರುವ ಜಗಜ್ಯೋತಿ ಬಸವೇಶ್ವರರ ಪ್ರತಿಮೆಗೆ ಮಾಲಾರ್ಪಣೆ, ಯಲಹಂಕ ಡೈರಿ ವೃತ್ತದಿಂದ ಶಿವಕುಮಾರ ಸಭಾಂಗಣದ ವರೆಗೆ ಭವ್ಯವಾಗಿ ಅಲಂಕೃತವಾದ ರಥದಲ್ಲಿ ಜಗದ್ಗುರು ರೇಣುಕಾಚಾರ್ಯ ಮತ್ತು ಶ್ರೀ ಜಗಜ್ಯೋತಿ ಬಸವೇಶ್ವರರ ಭಾವಚಿತ್ರಗಳನ್ನಿಟ್ಟು, ವೀರಗಾಸೆ, ನಂದಿಧ್ವಜ ಮತ್ತು ಪೂರ್ಣಕುಂಭ ದೊಂದಿಗೆ ಮೆರವಣಿಗೆ ಸಾಗಲಿದೆ.

ಸಂಜೆ 6 ಗಂಟೆಗೆ ವೇದಿಕೆಯ ಕಾರ್ಯಕ್ರಮ ಏರ್ಪಡಿಸಲಾಗಿದ್ದು, ಶಿವಗಂಗಾ ಕ್ಷೇತ್ರದ ಶ್ರೀ ಮೇಲಣಗವಿ ವೀರಸಿಂಹಾಸನ ಸಂಸ್ಥಾನ ಮಠದ ಡಾ.ಮಲಯ ಶಾಂತಮುನಿ ಶಿವಾಚಾರ್ಯ ಸ್ವಾಮಿಗಳು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಯಲಹಂಕ ಶಾಸಕ ಎಸ್ ಆರ್ ವಿಶ್ವನಾಥ್ ವಹಿಸಲಿದ್ದಾರೆ. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪ, ಅಖಿಲ ಭಾರತ ವೀರಶೈವ ಮಹಾಸಭಾದ ಬೆಂಗಳೂರು ಜಿಲ್ಲಾಧ್ಯಕ್ಷ ಎಸ್ ಗುರುಸ್ವಾಮಿ ಭಾಗವಹಿಸಲಿದ್ದು, ಸಮುದಾಯದ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಬಸವ ಜಯಂತ್ಯೋತ್ಸವದ ಪ್ರಯುಕ್ತ ಶರಣ ಜೀವನ-ವಚನ ಹೂರಣ ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮ, ಲಾಸ್ಯವರ್ಧನ ಪ್ರತಿಷ್ಠಾನ ತಂಡದಿಂದ ಅನುಭವ ಮಂಟಪ ನಾಟಕೋತ್ಸವ ಪ್ರದರ್ಶನಗೊಳ್ಳಲಿದೆ. ಯಲಹಂಕ ವೀರಶೈವ ಲಿಂಗಾಯತ ಸಮನ್ವಯ ಸಮಿತಿಯ ಅಧ್ಯಕ್ಷೆ ಹೇಮಲತಾ ಚಿದಾನಂದ ಕಾರ್ಯಕ್ರಮ ಕುರಿತು ಮಾಹಿತಿ ನೀಡಿದ್ದಾರೆ.

# ಹೋಟೆಲ್ ಬಿಲ್ ಬಾಕಿ ಸೌಹಾರ್ದಯುತ ಇತ್ಯರ್ಥ: ಖಂಡ್ರೆ

ಬೆಂಗಳೂರು: ಕಳೆದ ವರ್ಷ ಏಪ್ರಿಲ್ ನಲ್ಲಿ ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರ (ಎನ್.ಟಿ.ಸಿ.ಎ) ವತಿಯಿಂದ ರಾಜ್ಯದಲ್ಲಿ ಆಯೋಜಿಸಲಾಗಿದ್ದ ಹುಲಿ ಯೋಜನೆ -50 ಕಾರ್ಯಕ್ರಮಕ್ಕೆ ಮೈಸೂರಿಗೆ ಆಗಮಿಸಿದ್ದ ಪ್ರಧಾನಿ ನರೇಂದ್ರ ಮೋದಿ ಅವರ ಆತಿಥ್ಯದ ಬಿಲ್ ಬಾಕಿಯನ್ನು ಸೌಹಾರ್ದಯುತವಾಗಿ ಇತ್ಯರ್ಥಪಡಿಸಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಮಾಧ್ಯಮ ಪ್ರತಿನಿಧಿಗಳು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಅವರು, 2023ರ ಏಪ್ರಿಲ್‌ನಲ್ಲಿ ಈ ಕಾರ್ಯಕ್ರಮ ನಡೆದಾಗ, ವಿಧಾನಸಭಾ ಚುನಾವಣೆ ಮಾದರಿ ನೀತಿ ಸಂಹಿತೆ ಜಾರಿಯಲ್ಲಿತ್ತು ಹೀಗಾಗಿ ರಾಜ್ಯ ಸರ್ಕಾರ ಭಾಗಿ ಆಗಿರಲಿಲ್ಲ.

ರಾಜ್ಯ ಲಾಂಛನದ ಬಳಕೆಯೂ ಆಗಿರಲಿಲ್ಲ. ಇದು ಸಂಪೂರ್ಣ ಎನ್.ಟಿ.ಸಿ.ಎ. ಕಾರ್ಯಕ್ರಮವಾಗಿತ್ತು ಎಂದರು.

ದೇಶದ ಪ್ರಧಾನಿಯವರು ರಾಜ್ಯಕ್ಕೆ ಬಂದಿದ್ದ ಹಿನ್ನೆಲೆಯಲ್ಲಿ ಆತಿಥ್ಯ ನಿರ್ವಹಣೆಗಾಗಿ ಸ್ಥಳೀಯವಾಗಿ ರಚಿಸಲಾಗಿದ್ದ ಸಮಿತಿಯಲ್ಲಿ ನಮ್ಮ ಅರಣ್ಯ ಇಲಾಖೆಯ ಅಧಿಕಾರಿಗಳು ಇದ್ದರು.

ವಾಸ್ತವವಾಗಿ ಈ ಕಾರ್ಯಕ್ರಮಕ್ಕೆ ಆಗುವ ಸಂಪೂರ್ಣ ವೆಚ್ಚವನ್ನು ಭರಿಸುವುದಾಗಿ ಎನ್.ಟಿ.ಸಿ.ಎ. ಹೇಳಿತ್ತು ಎಂದು ವಿವರಿಸಿದರು.



ಕಾರ್ಯಕ್ರಮಕ್ಕೆ ಆಗಿರುವ ವೆಚ್ಚ 6 ಕೋಟಿ 33 ಲಕ್ಷ. ಈ ಪೈಕಿ 3 ಕೋಟಿ ರೂಪಾಯಿ ಬಂದಿದ್ದು, ಇನ್ನೂ 3ಕೋಟಿ 33 ಲಕ್ಷ ರೂ. ಬಾಕಿ ಬರಬೇಕಿದೆ. ಇದರಲ್ಲಿ ರಾಡಿಸನ್ ಬ್ಲೂ ಆತಿಥ್ಯವೆಚ್ಚ ಸುಮಾರು 80 ಲಕ್ಷ ರೂ. ಸೇರಿದೆ ಎಂದು ತಿಳಿಸಿದರು.

ಈ ಬಗ್ಗೆ ನಮ್ಮ ಇಲಾಖೆಯ ಅಧಿಕಾರಿಗಳು ಹಲವು ಬಾರಿ ಪತ್ರ ಬರೆದಿದ್ದರೂ, ಫೋನ್ ಮಾಡಿದ್ದರೂ ಎನ್.ಟಿ.ಸಿ.ಎ. (ರಾಷ್ಟ್ರೀಯ ಹುಲಿ ಸಂರಕ್ಷಣಾ ಪ್ರಾಧಿಕಾರ) ಈ ಬಾಕಿ ಹಣ ನೀಡಿಲ್ಲ. ಈಗ ವಿಷಯ ತಮ್ಮ ಗಮನಕ್ಕೆ ಬಂದಿದ್ದು, ಸೌಹಾರ್ದಯುತವಾಗಿ ಪರಿಹರಿಸಲು ಪ್ರಯತ್ನಿಸುವುದಾಗಿ ಹೇಳಿದ್ದಾರೆ.



ಬೆಂಗಳೂರು: ವಿಧಾನಪರಿಷತ್ ಚುನಾವಣೆ ಹಿನ್ನೆಲೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ಇಂದು ದಾವಣಗೆರೆ ಜಿಲ್ಲೆಯ ವಿಶ್ವಚೇತನ ಶಿಕ್ಷಣ ಸಂಸ್ಥೆ ಮತ್ತು ಸಿದ್ಧಗಂಗಾ ಕಾಲೇಜಿನಲ್ಲಿ ಮತ ಯಾಚನೆ ಮಾಡಿದರು.

# ನಕಲಿ ಕಿಡ್ನಾಪ್ ಪ್ರಕರಣ ದಾಖಲಿಸಿ ಪೇಚಿಗೆ ಸಿಲುಕಿದ ಪೊಲೀಸ್ ಅಧಿಕಾರಿಯ ಪುತ್ರ

ಬೆಂಗಳೂರು: ಪೊಲೀಸ್ ಅಧಿಕಾರಿಯೊಬ್ಬರ 22 ವರ್ಷದ ಮಗ ನಕಲಿ ಅಪಹರಣ ಮತ್ತು ಹಲ್ಲೆ ಪ್ರಕರಣ ದಾಖಲಿಸಿ ಪೇಚಿಗೆ ಸಿಲುಕಿದ್ದಾನೆ. ಜ್ಞಾನಭಾರತಿಯ ಉಳ್ಳಾಲ ಮುಖ್ಯರಸ್ತೆ ನಿವಾಸಿ ಗೌತಮ್ ಸುರೇಶ್ ಮಂಗಳವಾರ ಜ್ಞಾನಭಾರತಿ ಠಾಣೆಯಲ್ಲಿ ಸುಳ್ಳು ದೂರು ದಾಖಲಿಸಿದ್ದರು. ಗೌತಮ್ಮನ ತಂದೆ ಸುರೇಶ್ ಸಹಾಯಕ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಆಗಿದ್ದಾರೆ.

ಆರು ಮಂದಿ ದುಷ್ಕರ್ಮಿಗಳ ತಂಡ ತನ್ನನ್ನು ಅಪಹರಿಸಿ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿದೆ ಎಂದು ಗೌತಮ್ ದೂರಿನಲ್ಲಿ ತಿಳಿಸಿದ್ದಾರೆ. ದೂರು ದಾಖಲಾದ ನಂತರ ಪೊಲೀಸರಿಗೆ ದೂರಿನಲ್ಲಿ ಹೇಳಿರುವಂತೆ ಯಾವುದೇ ಸಾಕ್ಷ್ಯಾಧಾರಗಳು ಸಿಗಲಿಲ್ಲ. ಪೊಲೀಸರು ಆತನನ್ನು ಕರೆಸಿದಾಗ ತಂದೆಯ ಕೋಪದಿಂದ ತಪ್ಪಿಸಿಕೊಳ್ಳಲು ಸುಳ್ಳು ದೂರು ದಾಖಲಿಸಿದ್ದಾಗಿ ತಪ್ಪೊಪ್ಪಿಕೊಂಡಿದ್ದಾನೆ.

ಸೋಮವಾರ ರಾತ್ರಿ 9.30ಕ್ಕೆ ಗೌತಮ್ ತನ್ನ ಸ್ನೇಹಿತರೊಂದಿಗೆ ಪಾರ್ಟಿ ಮುಗಿಸಿ ಮನೆಗೆ ಮರಳುತ್ತಿದ್ದಾಗ ಉಳ್ಳಾಲ ಮುಖ್ಯರಸ್ತೆಯಲ್ಲಿ ತುಂತುರು ಮಳೆಯಾಗುತ್ತಿದ್ದರಿಂದ ಅತ್ಯಾಧುನಿಕ ಬೈಕ್‌ನಿಂದ ಜಾರಿ ಕೆಳಗೆ ಬಿದ್ದಿದ್ದಾರೆ. ಪರಿಣಾಮ ಅವರ ಬೈಕ್ ಹಾಗೂ ಮೊಬೈಲ್ ಜಖಂಗೊಂಡಿದೆ. ತಂದೆ ಬೈಯುತ್ತಾರೆ ಎಂದು ಭಾವಿಸಿ ಗೌತಮ್ ಬೈಕ್‌ನ ಉಪಕರಣಗಳನ್ನು ಬಳಸಿ ಗಾಯ ಮಾಡಿಕೊಂಡಿದ್ದಾರೆ. ಬಳಿಕ ತನ್ನ ತಂದೆ ಮತ್ತು ಸ್ನೇಹಿತರಿಗೆ ಕರೆ ಮಾಡಿ ಸುಳ್ಳು ಮಾಹಿತಿ ನೀಡಿದ್ದಾನೆ. ತಕ್ಷಣ ಆತನನ್ನು ಚಿಕಿತ್ಸೆಗಾಗಿ ತಂದೆ ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ಇದು ಮೆಡಿಕೋ ಲೀಗಲ್ ಕೇಸ್ ಆಗಿದ್ದರಿಂದ ಆಸ್ಪತ್ರೆಯವರು ಪೊಲೀಸರಿಗೆ ದೂರು ನೀಡಿದ್ದಾರೆ.

# ಮದ್ಯ ಸೇವಿಸಿ ವಾಹನ ಚಾಲನೆ ರಾತ್ರಿಯಿಡೀ ತಪಾಸಣೆ

ಬೆಂಗಳೂರು: ಮಹಾರಾಷ್ಟ್ರದ ಪುಣೆಯಲ್ಲಿ ಅಪ್ರಾಪ್ತನ ಐಷಾರಾಮಿ ಕಾರು ಅಪಘಾತ ಪ್ರಕರಣದ ಬೆನ್ನಲ್ಲೇ ಎಚ್ಚೆತ್ತಿರುವ ನಗರದ ಸಂಚಾರ ಪೊಲೀಸರು ವಿಶೇಷ ಕಾರ್ಯಾಚರಣೆ ನಡೆಸಿದ್ದು ಮದ್ಯಸೇವಿಸಿ ವಾಹನ ಚಲಾಯಿಸುವವರ ವಿರುದ್ಧ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಕಾರ್ಯಾಚರಣೆ ವೇಳೆ ಹಲವು ಮದ್ಯ ಸೇವಿಸಿ ವಾಹನ ಚಾಲನೆ ಪ್ರಕರಣಗಳು ಪತ್ತೆಯಾಗಿವೆ. ಮದ್ಯಸೇವಿಸಿ ವಾಹನ ಚಲಾಯಿಸುತ್ತಿದ್ದ ಹಲವರ ವಾಹನಗಳನ್ನು ವಶಕ್ಕೆ ಪಡೆಯಲಾಗಿದೆ. ಈ ವೇಳೆ ಹೆಚ್ಚಿನ ಸಂಖ್ಯೆಯಲ್ಲಿ ಮದ್ಯ ಸೇವನೆ ವಾಹನ ಚಾಲನೆ ಪ್ರಕರಣಗಳು ಪತ್ತೆಯಾಗಿದ್ದು ಇನ್ಮುಂದೆ ವಾರ ಅಥವಾ 15 ದಿನಕ್ಕೊಮ್ಮೆ ಕಾರ್ಯಾಚರಣೆ ನಡೆಸಲು ನಿರ್ಧಾರ ಮಾಡಲಾಗಿದೆ.

ಇನ್ನು ದಕ್ಷಿಣ ವಿಭಾಗದಲ್ಲಿ 41 ಕಡೆ ಚೆಕ್‌ಪೋಸ್ಟ್ ಹಾಕಿ ವಿಶೇಷ ಕಾರ್ಯಾಚರಣೆ ಮಾಡಲಾಯಿತು. ಸಂಚಾರ ಸಬ್ ಇನ್ಸ್‌ಪೆಕ್ಟರ್ ನೇತೃತ್ವದಲ್ಲಿ ಪ್ರತಿಯೊಂದು ವಾಹನ ತಪಾಸಣೆ ಮಾಡಿ ಮದ್ಯಸೇವಿಸಿ ವಾಹನ ಚಲಾಯಿಸುವವರಿಗೆ ಸ್ಥಳದಲ್ಲೇ ದಂಡ ಹಾಕಲಾಯಿತು. ಒಂದೇ ರಾತ್ರಿಯಲ್ಲಿ 160ಕ್ಕೂ ಹೆಚ್ಚು ಕೇಸ್‌ಗಳು ದಾಖಲಾಗಿವೆ.

# ಇದು ಎಷ್ಟು ಪರ್ಸೆಂಟ್ ಸರಕಾರ?: ನಾರಾಯಣಸ್ವಾಮಿ

ಬೆಂಗಳೂರು: ಪ್ರಜಾಪ್ರಭುತ್ವ ವ್ಯವಸ್ಥೆಗೆ ಕಾಂಗ್ರೆಸ್ ಸರಕಾರ ಕೊಟ್ಟ ಬೆಲೆ ಏನು ಎಂದು ವಿಧಾನಪರಿಷತ್ ಸದಸ್ಯ ಛಲವಾದಿ ನಾರಾಯಣಸ್ವಾಮಿ ಅವರು ಪ್ರಶ್ನಿಸಿದರು.



ನಗರದ ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ವಿಪಕ್ಷ, ವಿಪಕ್ಷದ ನಾಯಕರು ಒಂದು ವಿಚಾರದಲ್ಲಿ ಸರಕಾರದ ಗಮನ ಸೆಳೆಯುವ ಕೆಲಸ ಮಾಡಿದ ತಕ್ಷಣ ಎಚ್ಚತ್ತುಕೊಳ್ಳಬೇಕು; ಅದನ್ನು ಪರಿಹರಿಸಬೇಕು. ಆದರೆ, ಈ ಸರಕಾರ ಅತ್ತ ಗಮನ ಕೊಟ್ಟಿಲ್ಲ ಎಂದು ತಿಳಿಸಿದರು.

ಕಾನೂನು- ಸುವ್ಯವಸ್ಥೆ ತೀವ್ರವಾಗಿ ಹದಗೆಟ್ಟ ಕುರಿತು ತಿಂಗಳುಗಟ್ಟಲೆ ಕಾಲ ಬಿಜೆಪಿ ತಿಳಿಸಿದ್ದರೂ ಈ ಮಾನಗೇಡಿ ಸರಕಾರ ಎಚ್ಚತ್ತುಕೊಂಡಿಲ್ಲ; ಅದನ್ನು ಸರಿಪಡಿಸುವ ಕೆಲಸ ಮಾಡಿಲ್ಲ ಎಂದು ಟೀಕಿಸಿದರು.

ಅತ್ಯಾಚಾರ, ಲವ್ ಜಿಹಾದ್ ವಿಚಾರದಲ್ಲಿ ಸರಕಾರ ಗಮನ ಕೊಡುತ್ತಿಲ್ಲ. ಕೊಲೆಗಳೂ ಹೆಚ್ಚಾಗಿವೆ. ನಿನ್ನೆ ಕಸ್ಟಡಿ ಸಾವು ಸಂಭವಿಸಿದೆ. ಯಾರಾದರೂ ಇವುಗಳ ಕುರಿತು ಪ್ರಶ್ನಿಸಿದರೆ ಎಲ್ರೀ ಹದಗೆಟ್ಟಿದೆ ಎಂದು ಉಡಾಫೆ ಮಾತನಾಡುತ್ತಾರೆ ಎಂದು ದೂರಿದರು.

ಗುಲ್ಬರ್ಗಕ್ಕೆ ಪಿಎಚ್‌ಡಿ ಮಾಡಲೆಂದು ಹೋಗಿದ್ದ ದಲಿತ ಸಾಹಿತಿ ಆನಂದ್ ಸಾವನ್ನಪ್ಪಿದ್ದು ಯಾಕೆ? ಇದರ ಬಗ್ಗೆ ಜಿಲ್ಲಾ ಸಚಿವರು, ಗೃಹ ಸಚಿವರು ಮತ್ತು ಮುಖ್ಯಮಂತ್ರಿಗಳು ತಲೆಕೆಡಿಸಿಕೊಂಡಿಲ್ಲ. ಏನಾದರೂ ಕೇಳಿದರೆ ಬೇರೆ ಸರಕಾರ ಇದ್ದಾಗ ಮರ್ಡರ್ ಆಗಿಲ್ವ? ಎಂದು ಕೇಳುತ್ತಾರೆ. ಇದು ಉಡಾಫೆ ಉತ್ತರವಲ್ಲವೇ ಎಂದು ಕೇಳಿದರು.

ನೀವು ಕೇವಲ ಲೂಟಿ ಮಾಡಲೆಂದು ಬಂದಿದ್ದೀರಾ? ಎಂದರಲ್ಲದೆ, ಇಡೀ ದೇಶದಲ್ಲಿ ನಡೆಯುವ ಚುನಾವಣೆಗೆ ಕರ್ನಾಟಕ ಎಟಿಎಂ ಆಗಿದೆ ಎಂದು ಅವರು ತಿಳಿಸಿದರು. ಪಂಚರಾಜ್ಯ ಚುನಾವಣೆಗೆ ದುಡ್ಡು ಕೊಟ್ಟಿದ್ದಾಯ್ತು. ಈಗ ಸಂಸತ್ ಚುನಾವಣೆಗೂ ದುಡ್ಡು ಕೊಟ್ಟಿದ್ದಾಯ್ತು. ನಮ್ಮ ಮೇಲೆ 40 ಪರ್ಸೆಂಟ್ ಸರಕಾರ ಎಂದು ಹೇಳಿದ ನೀವು, ಈಗ ನಿಮ್ಮದು ಎಷ್ಟು ಪರ್ಸೆಂಟ್ ಸರಕಾರ ಎಂದು ಉತ್ತರ ಕೊಡಿ ಎಂದು ಆಗ್ರಹಿಸಿದರು.

ಈ ಸರಕಾರ ನಮ್ಮ ರಕ್ತ ಹೀರುತ್ತಿದೆ. ಶೇ 60ರಷ್ಟು ಕಮಿಷನ್ ಎಂದು ಗುತ್ತಿಗೆದಾರರು ಹೇಳುತ್ತಿದ್ದಾರೆ ಎಂದು ಅವರು ಗಮನ ಸೆಳೆದರು. ಈ ಸರಕಾರ ಒಂದು ತುಂಡು ಗುತ್ತಿಗೆಯನ್ನೂ ಕೊಟ್ಟಿಲ್ಲ. ನಮ್ಮ ಸರಕಾರದ ಕಾಮಗಾರಿಗಳಿಗೆ ಶೇ. 60 ಕಮಿಷನ್ ಹೊಡೆಯುತ್ತಿದೆ ಎಂದರೆ ಈ ಸರಕಾರದ ಪರಿಸ್ಥಿತಿಯನ್ನು ಜನರು ಅರ್ಥ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

# ಲಗೋರಿ ತಂಡದ ಆಯ್ಕೆ

ಬೆಂಗಳೂರು: ದೇಸೀಯ ಕ್ರೀಡೆ ಲಗೋರಿಯನ್ನು ಉಳಿಸಿ ಬೆಳೆಸುವ ಉದ್ದೇಶದಿಂದ ಅಮೆಚೂರು ಲಗೋರಿ ಅಸೋಸಿಯೇಷನ್ ಆಫ್ ಕರ್ನಾಟಕ ಮುಂದಾಗಿದ್ದು, ಕರ್ನಾಟಕ ರಾಜ್ಯ ಲಗೋರಿ ಜ್ಯೂನಿಯರ್ ಬಾಲಕ ಮತ್ತು ಬಾಲಕಿಯರ ಆಯ್ಕೆ ಪ್ರಕ್ರಿಯೆಯನ್ನು ಇದೇ 26 ರಂದು ನಗರದ ಸರ್ಕಾರಿ ಕಲಾ ಕಾಲೇಜು ಆವರಣದಲ್ಲಿ ನಡೆಸಲಿದೆ.

ಮಹಾರಾಷ್ಟ್ರದ ರತ್ನಗಿರಿಯ ಎಸ್.ವಿ.ಜೆ.ಸಿ.ಟಿ ಸ್ಪೋರ್ಟ್ಸ್ ಅಕಾಡೆಮಿಯಲ್ಲಿ 8ನೇ ರಾಷ್ಟ್ರಮಟ್ಟದ ಲಗೋರಿ ಚಾಂಪಿಯನ್‌ಶಿಪ್ ಜೂ.28ರಿಂದ30ರ ವರೆಗೆ ನಡೆಯಲಿದ್ದು, ರಾಜ್ಯವನ್ನು ಪ್ರತಿನಿಧಿಸುವ ಜ್ಯೂನಿಯರ್ ತಂಡವನ್ನು ಸರ್ಕಾರಿ ಕಲಾ ಕಾಲೇಜಿನ ಒಳಾಂಗಣದಲ್ಲಿ ಆಯ್ಕೆ ಪ್ರಕ್ರಿಯೆ ನಡೆಸಲಾಗುತ್ತಿದೆ. ಅರ್ಹ ಕ್ರೀಡಾಪಟುಗಳು ಭಾಗವಹಿಸಬಹುದು ಎಂದು ಅಸೋಸಿಯೇಷನ್ ನ ಪ್ರಧಾನ ಕಾರ್ಯದರ್ಶಿ ರಾಜೇಶ್ ಬಿ.ಟಿ ಮತ್ತು ಜಂಟಿ ಕಾರ್ಯದರ್ಶಿ ಎ. ಪರಮ ಶಿವಂ ತಿಳಿಸಿದ್ದಾರೆ.

ದೇಸಿ ಆಟ ಲಗೋರಿ ಈಗಾಗಲೇ ರಾಷ್ಟ್ರಮಟ್ಟದ ಕ್ರೀಡಾಕೂಟದಲ್ಲಿ ಸ್ಥಾನ ಪಡೆದಿದ್ದು, ಬರುವ ವರ್ಷದಿಂದ ಖೇಲೋ ಇಂಡಿಯಾ ಕ್ರೀಡಾಕೂಟದಲ್ಲೂ ಲಗೋರಿ ಸ್ಥಾನ ಪಡೆಯಲಿದೆ ಎಂದು ಅವರು ಹೇಳಿದ್ದಾರೆ.



# ಸೆರೆನ್ ಮೆಡ್ ಲೌಂಜ್ ತನ್ನ ಮೊದಲ ಕ್ಲಿನಿಕ್ ಬೆಂಗಳೂರಿನಲ್ಲಿ ಪ್ರಾರಂಭ

ಬೆಂಗಳೂರು: ಆರೋಗ್ಯ ರಕ್ಷಣೆಯಲ್ಲಿ ನಾವೀನ್ಯತೆ ಮತ್ತು ಸಹಾನುಭೂತಿಯ ದಾರಿದೀಪವಾದ ಸೆರೆನ್ ಮೆಡ್ ಲೌಂಜ್, ಬೆಂಗಳೂರಿನಲ್ಲಿ ತನ್ನ ಮೊದಲ ಕ್ಲಿನಿಕ್ ಅನ್ನು ಪ್ರಾರಂಭಿಸಿದ್ದಾಗಿ ಹೆಮ್ಮೆಯಿಂದ ಘೋಷಿಸಿತು. ಈ ಹೆಗ್ಗುರುತು ಸಂದರ್ಭವು ಅತ್ಯಾಧುನಿಕ ವೈದ್ಯಕೀಯ ತಂತ್ರಗಳನ್ನು ಸರಿಸಾಟಿಯಿಲ್ಲದ ರೋಗಿ ಕೇಂದ್ರಿತ ಆರೈಕೆಯೊಂದಿಗೆ ಸಂಯೋಜಿಸುವ ಮೂಲಕ ಆರೋಗ್ಯ ರಕ್ಷಣೆಯಲ್ಲಿ ಕ್ರಾಂತಿಯನ್ನುಂಟು ಮಾಡುವ ಸೆರೆನ್ ಮೆಡ್ ಲೌಂಜ್‌ನ ಮಿಷನ್‌ನಲ್ಲಿ ಮಹತ್ವದ ಹೆಜ್ಜೆಯನ್ನು ಗುರುತಿಸುತ್ತದೆ.

ಉದ್ಘಾಟನಾ ಸಮಾರಂಭದಲ್ಲಿ ಕರ್ನಾಟಕ ಸರ್ಕಾರದ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪ್ರವಾಸೋದ್ಯಮ ಸಚಿವರಾದ ಶ್ರೀ ಹೆಚ್ ಕೆ ಪಾಟೀಲ್,ಕನ್ನಡದ ಖ್ಯಾತ ನಟಿ ತೇಜಸ್ವಿನಿ ಶರ್ಮಾ ಮತ್ತು ಇತರ ಪ್ರಮುಖ ಗಣ್ಯರು ಉಪಸ್ಥಿತರಿದ್ದರು.



ಸೆರೆನ್ ಮೆಡ್ ಲೌಂಜ್ ಶಸ್ತ್ರಚಿಕಿತ್ಸಾ ನಾವೀನ್ಯತೆಗಾಗಿ ಹೊಸ ಮಾನದಂಡವನ್ನು ಹೊಂದಿಸಿದೆ, ಬೊಜ್ಜು ಮತ್ತು ಚಯಾಪಚಯ ಚಿಕಿತ್ಸೆಗಳು ಮತ್ತು ಸುಧಾರಿತ ಲ್ಯಾಪರೊಸ್ಕೋಪಿಕ್ ಶಸ್ತ್ರಚಿಕಿತ್ಸೆಗಳಲ್ಲಿ ಪರಿಣತಿ ಹೊಂದಿದೆ.

ಅಸಾಂಪ್ರದಾಯಿಕ ತಂತ್ರಜ್ಞಾನಗಳು ಉನ್ನತ ವೈದ್ಯಕೀಯ ಫಲಿತಾಂಶಗಳನ್ನು ಖಚಿತಪಡಿಸುತ್ತವೆ ಮತ್ತು ರೋಗಿಗಳ ಸೌಕರ್ಯ ಮತ್ತು ಸುರಕ್ಷತೆಗೆ ಡೇಕೇರ್ ಶಸ್ತ್ರಚಿಕಿತ್ಸೆಗಳಿಗಾಗಿ ವಿನ್ಯಾಸಗೊಳಿಸಲಾದ ಹಲವು ಕಾರ್ಯವಿಧಾನಗಳು ಆದ್ಯತೆ ನೀಡುತ್ತವೆ, ತಂಡವು ಸ್ತ್ರೀರೋಗ ಸಮಸ್ಯೆಗಳು ಮತ್ತು ಬಂಜೆತನ ಚಿಕಿತ್ಸೆಗಳಿಗೆ ಸಹಾಯ ಮಾಡಲು ವಿಶೇಷವಾದ ಗೈನೆಕ್ ಲ್ಯಾಪರೊಸ್ಕೋಪಿಕ್ ಸರ್ಜನ್ ಅನ್ನು ಸಹ ಒಳಗೊಂಡಿದೆ. ಹೆಚ್ಚುವರಿಯಾಗಿ, ನಿಮ್ಮ ಆರೋಗ್ಯ ಕಾಳಜಿಯ ಎಲ್ಲಾ ಅಂಶಗಳನ್ನು ಪರಿಹರಿಸಲು ಕುಟುಂಬ ವೈದ್ಯರು ಬದ್ಧರಾಗಿದ್ದಾರೆ.

ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಕರ್ನಾಟಕ ಸರ್ಕಾರದ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪ್ರವಾಸೋದ್ಯಮ ಖಾತೆಯ ಗೌರವಾನ್ವಿತ ಸಚಿವರಾದ ಶ್ರೀ ಹೆಚ್ ಕೆ ಪಾಟೀಲ್, "ನಗರದಲ್ಲಿ ವಿಕಸನಗೊಳ್ಳುತ್ತಿರುವ ವೈದ್ಯಕೀಯ ಮೂಲಸೌಕರ್ಯದೊಂದಿಗೆ, ಸೆರೆನ್ ಮೆಡ್ ಲೌಂಜ್‌ನಂತಹ ಚಿಕಿತ್ಸಾಲಯಗಳು ಆರೋಗ್ಯ ಭ್ರಾತೃತ್ವಕ್ಕೆ ಹೊಸ ದೃಷ್ಟಿಕೋನವನ್ನು ನೀಡುತ್ತವೆ. ರೋಗಿಗಳ ಆರೈಕೆ ಮತ್ತು ಅತ್ಯಾಧುನಿಕ ಶಸ್ತ್ರಚಿಕಿತ್ಸಾ ತಂತ್ರಜ್ಞಾನಗಳ ವಿಧಾನಗಳನ್ನು ಕ್ಲಿನಿಕ್ ನೀಡಲು ಸಿದ್ಧವಾಗಿದೆ. ಇದು ನಗರ ಮತ್ತು ಅದರಾಚೆಗೆ ಆರೋಗ್ಯ ರಕ್ಷಣೆಯನ್ನು ಕ್ರಾಂತಿಗೊಳಿಸುತ್ತದೆ." ಎಂದು ಹೇಳಿದರು.

ಸಾಂಪ್ರದಾಯಿಕ ಚಿಕಿತ್ಸಾಲಯಗಳಿಗಿಂತ ಭಿನ್ನವಾಗಿ, ಸೆರೆನ್ ಮೆಡ್ ಲೌಂಜ್ ವಿಶ್ರಾಂತಿ ಕೋಣೆಗೆ ಸಮಾನವಾದ ವಾತಾವರಣವನ್ನು ನೀಡುತ್ತದೆ, ರೋಗಿಗಳ ವಿಶ್ರಾಂತಿ ಮತ್ತು ನೆಮ್ಮದಿಯನ್ನು ಉತ್ತೇಜಿಸುತ್ತದೆ. ವೈಯಕ್ತಿಕರಿಸಿದ, ಒಬ್ಬರಿಗೊಬ್ಬರು ಗಮನ ನೀಡುವ ಈ ವಿಶಿಷ್ಟ ಪರಿಕಲ್ಪನೆಯು ಒತ್ತಡ-ಮುಕ್ತ ಶಸ್ತ್ರಚಿಕಿತ್ಸಾ ಆರೋಗ್ಯದ ಮೇಲೆ ಕೇಂದ್ರೀಕರಿಸುತ್ತದೆ. ಸಾಮಾನ್ಯವಾಗಿ ವೈದ್ಯಕೀಯ ಭೇಟಿಗಳೊಂದಿಗೆ ಸಂಬಂಧಿಸಿದ ಆತಂಕವನ್ನು ನಿವಾರಿಸುವ ಗುರಿಯನ್ನು ಹೊಂದಿದೆ. ಬಾಗಿಲು ಮೂಲಕ ಹೆಜ್ಜೆ ಹಾಕುವ ಕ್ಷಣದಿಂದ ಯೋಗಕ್ಷೇಮದ ಪ್ರಜ್ಞೆಯನ್ನು ಉತ್ತೇಜಿಸುತ್ತದೆ.

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ–ಪೇಪರ್: www.munjaneevartheepaper.com
27 MONDAY MAY 2024
27 ಸೋಮವಾರ ಮೇ 2024

# ಧರ್ಮಸ್ಥಳ ಯೋಜನೆಯಿಂದ ಸಹಾಯ ಧನ ವಿತರಣೆ



ಮೂಡಲಗಿ: ತಾಲೂಕಿನ ಕಮಲದಿನ್ನಿ ಗ್ರಾಮದ ಮಡ್ಡಿ ತೋಟ ಹಾಲು ಉತ್ಪಾದಕರ ಸಹಕಾರಿ ಸಂಘಕ್ಕೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸಮುದಾಯ ಅಭಿವೃದ್ಧಿ ಇಲಾಖೆ ವತಿಯಿಂದ 2 ಲಕ್ಷ ರೂ ಸಹಾಯಧನದ ಚೆಕ್ ವಿತರಣಾ ಸಮಾರಂಭ ಶುಕ್ರವಾರ ಜರುಗಿತು.

ಸಹಾಯಧನ ಚೇಕ್ ವಿತರಿಸಿದ ಯೋಜನೆಯ ಜಿಲ್ಲಾ ನಿರ್ದೇಶಕರಾದನಾಗರತ್ನಾ ಹೆಗ್ಗಡೆ ಅವರು ಮಾತನಾಡಿ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸಂಸ್ಥಾಪಕರಾದ ಪೂಜ್ಯ ಶ್ರೀ ಡಾ.ವಿರೇಂದ್ರ ಹೆಗಡೆ ಅವರು ರಾಜ್ಯದಲ್ಲಿ ಮಹಿಳಾ ಸಬಲಿಕರಣ, ದೇವಸ್ಥಾನಗಳ ಜೀರ್ಣೋದಾರ, ಕೃಷಿ ಕ್ಷೇತ್ರ, ವೃದ್ಧಾಪ ವೇತನ ಜೋತೆಗೆ ಪ್ರತಿಯೊಂದು ಕ್ಷೇತ್ರಕ್ಕೆ ಸಹಾಯ ಸಹಕಾರ ಮಾಡುತ್ತಿದ್ದಾರೆ. ಈ ಸಹಾಯಧನವನ್ನು ಒಳ್ಳೆಯ ಕಾರ್ಯಕ್ಕೆ ಸದ್ಬಳಕ್ಕೆ ಮಾಡಿ ಕೊಳ್ಳಬೇಕೆಂದರು.

ಈ ಸಮಯದಲ್ಲಿ ಗ್ರಾಮಾಭಿವೃದ್ಧಿ ಯೋಜನೆಯ ಮೂಡಲಗಿ ತಾಲೂಕಾ ಯೋಜನಾಧಿಕಾರಿ ರಾಜು ನಾಯ್ಕ, ಹಾಲು ಉತ್ಪಾದಕರ ಸಂಘದ ಅಧ್ಯಕ್ಷ ರಮೇಶ ಕೆಂಚರಡ್ಡಿ, ಉಪಾಧ್ಯಕ್ಷ ಯಲ್ಲಪ್ಪ ಗಂಗರಡ್ಡಿ, ಅಪ್ಪಶಿ ಬಡಗಣ್ಣವರ, ಕೃಷ್ಣಪ್ಪ ಸೋನದ, ಶಂಕರ ಬುದ್ನಿ, ಯಲ್ಲಪ್ಪ ಸಂತಿ, ಸಚೀನ ಬದ್ನಿ, ಈರಣ್ಣ ಸಂತಿ, ವಲಯದ ಮೇಲ್ವಿಚಾರಕಿ ಕಾಮಾಕ್ಷಿ ನಾಯ್ಕ ಮತ್ತಿತರರು ಉಪಸ್ಥಿತರಿದ್ದರು.

# ಮಾನವ ಬಂಧುತ್ವ ವೇದಿಕೆ ವತಿಯಿಂದ ಬುದ್ಧ ಪೂರ್ಣಿಮೆ ಆಚರಣೆ

ಶಿರಾ: ಕ್ರೌರ್ಯ, ಮೌಢ್ಯ ಅಸಮಾನತೆ, ಕಂದಾಚಾರಗಳಂತಹ ಆಚರಣೆಗಳಿಂದ ನರಳುತ್ತಿದ್ದ ಜಗತ್ತಿಗೆ ಜ್ಞಾನದ ಬೆಳಕಾಗಿ ಶಾಂತಿ, ಸಮಾನತೆಯ ದಾರಿ ತೋರಿದವರು ಗೌತಮ ಬುದ್ದರು ಎಂದು ಮಾನವ ಬಂಧುತ್ವ ವೇದಿಕೆಯ ಜಿಲ್ಲಾ ಸಂಚಾಲಕರಾದ ಧರಣಿ ಕುಮಾರ್ ಹೇಳಿದರು.

ಅವರು ನಗರದ ಸಮತಾ ಸೈನಿಕ ಶಾಲೆ, ತರಬೇತಿ ಕೇಂದ್ರದಲ್ಲಿ ಮಾನವ ಬಂದುತ್ವ ವೇದಿಕೆ ವತಿಯಿಂದ ಹಮ್ಮಿಕೊಂಡಿದ್ದ ಬುದ್ಧ ಪೂರ್ಣಿಮೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಗೌತಮ ಬುದ್ಧರ ಸಂದೇಶಗಳು ಸರ್ವಕಾಲಿಕ ಹಾಗೂ ಸದಾ ಅನುಕರಣೀಯ. ಸಮಾಜದಲ್ಲಿ ದೇವರು ಧರ್ಮದ ಬಗ್ಗೆ ಮಾತನಾಡುತ್ತಿದ್ದಾಗ ಗೌತಮ ಬುದ್ದರು ಮನುಷ್ಯನ ಬಗ್ಗೆ ಮಾತನಾಡಿ ಮಾನವ ಬದುಕಿಗೆ ಘನತೆ ತಂದು ಕೊಟ್ಟವರು ಎಂದರು.

ಮುಖ್ಯ ಶಿಕ್ಷಕ ರಾಮರಾಜ್ ಮಾತನಾಡಿ ಬುದ್ದ ಬಸವರ ಚಿಂತನೆಗಳು ಇಂದಿನ ಸಮಾಜಕ್ಕೆ ಪ್ರಸ್ತುತವಾಗಿವೆ. ಭಾರತವನ್ನು ಜಗತ್ತಿನ ಇತರೆ ದೇಶಗಳು ಇಂದಿಗೂ ಬುದ್ದನ ನಾಡು ಎಂದೇ ಗುರುತ್ತಿಸುತ್ತದೆ. ಬುದ್ದ ಕೇವಲ ನೆನಪಲ್ಲ ಅದು ಸಮಾಜದ ಶಕ್ತಿಯ ಸೂಚಕ ಅಹಿಂಸೆ ಮತ್ತು ಕರುಣೆಯ ಸಮಾಜವನ್ನು ಗೌತಮ ಬುದ್ದರು ಬಯಸಿದ್ದರು ಎಂದರು.

ಕಾರ್ಯಕ್ರಮದಲ್ಲಿ ಮಾನವ ಬಂಧುತ್ವ ವೇದಿಕೆಯ ಸಂಚಲನಾ ಸಮಿತಿಯ ಸಂಚಾಲಕರಾದ ಎಸ್.ರಂಗರಾಜ್, ನವೋದಯ ಯುವ ವೇದಿಕೆ ಅಧ್ಯಕ್ಷ ಜಯರಾಮಕೃಷ್ಣ, ಶಿರಾ ನಗರಸಭೆ ಆಶ್ರಯ ಸಮಿತಿ ಸದಸ್ಯರಾದ ಜಯಲಕ್ಷ್ಮೀ, ಶಿರಾ ತಾಲ್ಲೂಕು ಮಹಿಳಾ ಸಂಚಾಲಕರಾದ ಯಲಿಯೂರು ಶಿವಮ್ಮ, ಉಪನ್ಯಾಸಕ ಶಂಕರ್, ನಿವೃತ್ತ ಪ್ರಾಂಶುಪಾಲರು ಹಾಗೂ ನಿರ್ಮಾಪಕರಾದ ಡಿ.ಎಸ್.ಕೃಷ್ಣಮೂರ್ತಿ, ನರಸಿಂಹಮೂರ್ತಿ, ರಾಜೇಂದ್ರ ಪ್ರಸಾದ್, ಲೋಕೇಶ್, ಸಾಹಿತಿ ರಮೇಶ್, ಮೂರ್ತಿ, ನವೀನ್ ಬೌದ್ಧವಂಶಿ, ಶಿವಮ್ಮ, ಕಿಟ್ಟಪ್ಪ, ಕಾಂಗ್ರೆಸ್ ಯುವ ಮುಖಂಡ ಲೋಕೇಶ್ ಸೇರಿದಂತೆ ಹಲವರು ಹಾಜರಿದ್ದರು.

# ರೈತರಿಗೆ ಬಿತ್ತನೆ ಬೀಜ, ರಸಗೊಬ್ಬರ ಕೊರತೆ ಆಗದಂತೆ ಎಚ್ಚರಿಕೆ ವಹಿಸಿ; ಡಿಸಿ

ಶಿರಾ : ಶಿರಾ ನಗರದ ವಿವಿಧ ರಸಗೊಬ್ಬರದ ಅಂಗಡಿಗಳು, ರೈತ ಸಂಪರ್ಕ ಕೇಂದ್ರ, ಎಪಿಎಂಸಿಯಲ್ಲಿರುವ ಶೇಂಗಾ ದಾಸ್ತಾನು ಕೇಂದ್ರ, ಮೇವು ಬ್ಯಾಂಕ್ ಕೇಂದ್ರಗಳಿಗೆ ಶುಕ್ರವಾರ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ನಂತರ ಮಾತನಾಡಿದ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ರೈತರಿಗೆ ಮುಂಗಾರು ಹಂಗಾಮಿಗೆ ಬಿತ್ತನೆ ಮಾಡಲು ಬಿತ್ತನೆ ಬೀಜ, ರಸಗೊಬ್ಬರ, ಕೀಟನಾಶಕ ಔಷಧಿಗಳ ಕೊರತೆ ಆಗದಂತೆ ಮಾರಾಟಗಾರರು ಎಚ್ಚರಿಕೆ ವಹಿಸಬೇಕು ಎಂದು ಕೃಷಿ ಪರಿಕರಗಳ ಮಾರಾಟಗಾರರಿಗೆ ತಿಳಿಸಿದರು.

ನಂತರ ಕಸಬಾ ಹೋಬಳಿಯ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿ ಬಿತ್ತನೆ ಬೀಜ, ಮೊಳಕೆ ಪರೀಕ್ಷೆ, ಬಿತ್ತನೆ ಬೀಜಗಳ ಮಾರಾಟದ ವಿವರ ಪರಿಶೀಲಿಸಿ ರೈತರಿಗೆ ಬಿತ್ತನೆ ಬೀಜ ವಿತರಿಸಿದರು. ರಸಗೊಬ್ಬರ ಬಿತ್ತನೆ ಬೀಜ ಮತ್ತು ಕೀಟನಾಶಕ ಔಷಧಿಗಳನ್ನು



ಮಾರಾಟ ಮಾಡುವ ಕೃಷಿ ಪರಕರಗಳ ದಾಸ್ತಾನು ಮಳಿಗೆಗೆ ಭೇಟಿ ನೀಡಿ ಪಿಓಎಸ್ ಯಂತ್ರ ಪರಿಶೀಲನೆ ನಡೆಸಿ ರಸಗೊಬ್ಬರ ಯಾವ ರೀತಿ, ಹೇಗೆ ವಿತರಿಸುತ್ತೀರ ಎಂದು ಅಂಗಡಿ ಮಾಲೀಕರಿಗೆ ತಿಳಿಸಿ ಯಾವುದೇ ವ್ಯತ್ಯಾಸವಾಗದಂತೆ ಎಚ್ಚರಿಕೆ ವಹಿಸುವಂತೆ ತಿಳಿಸಿದರು.

ನಂತರ ಚಿಕ್ಕನಹಳ್ಳಿಯಲ್ಲಿರುವ ಮೇವಿನ ಬ್ಯಾಂಕ್‌ಗೆ ಭೇಟಿ ನೀಡಿ ಪರಿಶೀಲಿಸಿ ಉತ್ತಮ ಮಳೆಯಾಗುವವರೆಗೂ ಮೇವನ್ನು ವಿತರಿಸಬೇಕು ಎಂದು ಉಪನಿರ್ದೇಶಕರು, ತಹಶೀಲ್ದಾರ್ ಮತ್ತು ಸಹಾಯಕ ಕೃಷಿ ನಿರ್ದೇಶಕರಿಗೆ ಸೂಚಿಸಿದರು. ತಹಶೀಲ್ದಾರ್ ಡಾ.ದತ್ತಾತ್ರೆಯ. ಜೆ.ಜೆ. ಹಾಗೂ ಸಹಾಯಕ ಕೃಷಿ ನಿರ್ದೇಶಕರಾದ ಹೆಚ್.ನಾಗರಾಜು ಅವರಿಗೆ ಈ ಬಾರಿ ಉತ್ತಮ ಮಳೆಯಾಗುತ್ತಿದ್ದು, ಉಳುಮೆಗೆ, ಬಿತ್ತನೆ ಬೀಜ, ರಸಗೊಬ್ಬರ ದಾಸ್ತಾನುಗಳ ಬಗ್ಗೆ ಎಚ್ಚರಿಕೆ ವಹಿಸುವಂತೆ ಸೂಚಿಸಿದರು.

ಈ ಸಂದರ್ಭದಲ್ಲಿ ಉಪ ವಿಭಾಗಾಧಿಕಾರಿ ಶಿವಪ್ಪ.ಜಿ, ಪೌರಾಯುಕ್ತ ರುದ್ರೇಶ್, ತಾ.ಪಂ. ಕಾರ್ಯನಿರ್ವಹಕ ಅಧಿಕಾರಿ ಹನುಮಂತಪ್ಪ, ಹಿರಿಯ ತೋಟಗಾರಿಕಾ ಸಹಾಯಕ ನಿರ್ದೇಶಕ ಸುದಾಕರ್, ಪಶುಪಾಲನ ಇಲಾಖೆಯ ಉಪನಿರ್ದೇಶಕ ಡಾ.ಗಿರೀಶ್ ರೆಡ್ಡಿ, ಸಹಾಯಕ ನಿರ್ದೇಶಕ ಡಾ.ರಮೇಶ್, ಸಣ್ಣ ನೀರಾವರಿ ಇಲಾಖೆಯ ಎಇಇ ಪ್ರಭಾಕರ್, ಎಇ ನಾಗೇಂದ್ರಪ್ಪ, ಕೃಷಿ ಅಧಿಕಾರಿಗಳಾದ ಸತ್ಯನಾರಾಯಣ, ನಟರಾಜು, ಕಸಬಾ ಕಂದಾಯ ನಿರೀಕ್ಷಕ ಸುದರ್ಶನ್ ಸೇರಿದಂತೆ ಹಲವರು ಹಾಜರಿದ್ದರು.

# ಯುವಕರು ಸೇವಾ ಮನೋಭಾವನೆ ಜೀವನದ ಉಸಿರಾಗಬೇಕು: ಕೃಷ್ಣಮೂರ್ತಿ




ಕೃಷ್ಣರಾಜಪೇಟೆ: ಯುವ ಜನರು ಸಾಧಿಸುವ ಗುಣಗಳನ್ನು ಮೈಗುಡಿಸಿಕೊಂಡು ಸಮಾಜಮುಖಿಯಾಗಿ ಹೆಜ್ಜೆ ಹಾಕಬೇಕು. ಸೇವಾ ಮನೋಭಾವನೆ ಮತ್ತು ಪರೋಪಕಾರ ಗುಣಗಳು ಜೀವನದ ಉಸಿರಾಗಬೇಕು ಎಂದು ಪ್ರಾಧ್ಯಾಪಕ ಮೈಸೂರು ಕೃಷ್ಣಮೂರ್ತಿ ಕರೆ ನೀಡಿದರು.

ಅವರು ಕೃಷ್ಣರಾಜಪೇಟೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಾಂಸ್ಕೃತಿಕ, ಕ್ರೀಡಾ, ರೆಡ್ ಕ್ರಾಸ್, ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಹಾಗೂ ರಾಷ್ಟ್ರೀಯ ಸೇವಾ ಯೋಜನಾ ಚಟುವಟಿಕೆಗಳ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದರು.

ಯುವ ಜನರು ಹಾಗೂ ವಿದ್ಯಾರ್ಥಿಗಳಲ್ಲಿ ಶಿಕ್ಷಣದ ಜ್ಞಾನದ ಬೆಳಕಿನ ಸಂಸ್ಕಾರದ ಜೊತೆಗೆ ಸಾಂಸ್ಕೃತಿಕ ಚಟುವಟಿಕೆಗಳು ಹಾಸು ಹೊಕ್ಕಾಗುವುದರಿಂದ ರಾಕ್ಷಸಿ ಗುಣಗಳು ದೂರಾಗಿ ಮಾನವತೆಯ ಸಂಸ್ಕಾರ ಮೂಡಿ ಪರಿಪೂರ್ಣವಾದ ವ್ಯಕ್ತಿಗಳನ್ನಾಗಿ ರೂಪಿಸುತ್ತವೆ. ನಾವು ಪರಿಪೂರ್ಣವಾದ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಲು ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳು ನೆರವಾಗುವುದರಿಂದ ವಿದ್ಯಾರ್ಥಿಗಳು ಪಠ್ಯ ಚಟುವಟಿಕೆಗಳಿಗೆ ನೀಡುವಷ್ಟೇ ಆಧ್ಯತೆಯನ್ನು ಕ್ರೀಡಾ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಿಗೆ ನೀಡಬೇಕು ಎಂದು ಕಿವಿಮಾತು ಹೇಳಿದ ಕೃಷ್ಣಮೂರ್ತಿ ವಿದ್ಯಾರ್ಥಿ ಜೀವನವು ಚಿನ್ನದ ಜೀವನವಾದ್ದರಿಂದ ವಿದ್ಯಾರ್ಥಿಗಳು ಶ್ರದ್ಧಾ ಭಕ್ತಿ ಯಿಂದ ವ್ಯಾಸಂಗ ಮಾಡಿ ಗುರಿಸಾಧನೆ ಮಾಡಬೇಕು. ಪದವಿ ಶಿಕ್ಷಣವು ವಿದ್ಯಾರ್ಥಿ ಜೀವನದ ನಿರ್ಣಾಯಕ ಘಟ್ಟವಾದ್ದರಿಂದ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಿ ಸಾಧನೆ ಮಾಡಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸಿ ಉದ್ಘಾಟಿಸಿದ ಕಾಲೇಜಿನ ಪ್ರಾಂಶುಪಾಲರಾದ ಹೆಚ್.ಎಂ.ಹೇಮಲತಾ ಮಾತನಾಡಿ ವಿದ್ಯಾರ್ಥಿಗಳಿಗೆ ವಿನಯವಂತಿಕೆ ಹಾಗೂ ಸಂಸ್ಕಾರ ಗುಣಗಳು ಭೂಷಣವಾಗಬೇಕು. ಈ ದಿಕ್ಕಿನಲ್ಲಿ ಶಿಕ್ಷಣದ ಸಂಸ್ಕಾರದ ಜೊತೆಗೆ ಸಾಂಸ್ಕೃತಿಕ ಚಟುವಟಿಕೆ ಮತ್ತು ಕ್ರೀಡಾ ಚಟುವಟಿಕೆಯ ಮೂಲಕ ಸಮಗ್ರವಾದ ವ್ಯಕ್ತಿತ್ವವನ್ನು ರೂಪಿಸುವ ಕೆಲಸ ಮಾಡುತ್ತಿರುವ ಆಧ್ಯಾಪಕರು ವಿದ್ಯಾರ್ಥಿಗಳ ಬೆಳವಣಿಗೆಯನ್ನು ಸಂಭ್ರಮಿಸುತ್ತಿದ್ದಾರೆ. ಕಾಲೇಜಿನಲ್ಲಿ ನಡೆಯುವ ಪಠ್ಯೇತರ ಚಟುವಟಿಕೆಗಳು ವಿದ್ಯಾರ್ಥಿಗಳ ಮುನ್ನಡೆಗೆ ಸಹಕಾರಿಯಾಗಿವೆ. ವಿದ್ಯಾರ್ಥಿಗಳ ಅಭಿವೃದ್ಧಿಗೆ ದುಡಿಯುತ್ತಿರುವ ಪ್ರಾಧ್ಯಾಪಕರು ಹಾಗೂ ಸಿಬ್ಬಂದಿಗಳು ಗುಣಮಟ್ಟದ ಶಿಕ್ಷಣದ ಅನುಷ್ಠಾನಕ್ಕಾಗಿ ದುಡಿಯುತ್ತಿದ್ದಾರೆ. ವಿದ್ಯಾರ್ಥಿಗಳು ಉತ್ತಮವಾದ ಫಲಿತಾಂಶವನ್ನು ತಂದುಕೊಡುವ ಮೂಲಕ ಕಾಲೇಜಿನ ಕೀರ್ತಿಯನ್ನು ಎತ್ತಿ ಹಿಡಿಯಲು ಮುಂದಾಗಬೇಕು ಎಂದು ಹೇಮಲತಾ ಕರೆ ನೀಡಿದರು. ಪ್ರಾಧ್ಯಾಪಕರಾದ ರುದ್ರ, ಜಯಕೀರ್ತಿ, ಕುಮಾರಸ್ವಾಮಿ, ಗಿರೀಶ, ಭಾಗ್ಯಜ್ಯೋತಿ, ಎಂ.ಸುರೇಶ, ಮೋಹನಕುಮಾರ್, ಕಿರಣಕುಮಾರ್, ಪುಷ್ಪಲತಾ, ಪತ್ರಾಂಕಿತ ವ್ಯವಸ್ಥಾಪಕರಾದ ಬಿ.ಎ.ಮಂಜುನಾಥ್, ಭುವನೇಶ್ವರಿ ಸೇರಿದಂತೆ ವಿದ್ಯಾರ್ಥಿಗಳ ಪೋಷಕರು ಹಾಗೂ ಪಟ್ಟಣದ ನಾಗರಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ವಿದ್ಯಾರ್ಥಿಗಳು ನೀಡಿದ ಸಾಂಸ್ಕೃತಿಕ ಕಾರ್ಯಕ್ರಮಗಳು ರಂಜಿಸಿದವು.

# ಮೀನುಕುಂಟೆ ಗ್ರಾ.ಪಂ. ಅಧ್ಯಕ್ಷರಾಗಿ ಆಯ್ಕೆ

ಬ್ಯಾಟರಾಯನಪುರ: ಬ್ಯಾಟರಾಯನಪುರ ಕ್ಷೇತ್ರ ವ್ಯಾಪ್ತಿಯ ಜಾಲ ಹೋಬಳಿಯ ಮೀನುಕುಂಟೆ ಗ್ರಾ.ಪಂ.ನೂತನ ಅಧ್ಯಕ್ಷರಾಗಿ ಅದೇ ಗ್ರಾಮದ ಎಚ್ ಎನ್ ವಸಂತಕುಮಾರ್ ಆಯ್ಕೆಯಾಗಿದ್ದಾರೆ.

ಮೀನುಕುಂಟೆ ಗ್ರಾ.ಪಂ.ನಲ್ಲಿ ಒಟ್ಟು 21 ಜನ ಸದಸ್ಯ



ರಿದ್ದು, ಇತ್ತೀಚೆಗೆ ತೆರವಾದ ಅಧ್ಯಕ್ಷ ಸ್ಥಾನದ ಆಯ್ಕೆಗಾಗಿ ಗುರುವಾರ ನಡೆದ ಚುನಾವಣೆಯಲ್ಲಿ, ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಎಚ್ ಎನ್ ವಸಂತ ಕುಮಾರ್ 12 ಮತಗಳನ್ನು ಪಡೆಯುವ ಮೂಲಕ ನೂತನ ಅಧ್ಯಕ್ಷರಾಗಿ ಆಯ್ಕೆಯಾದರು. ಇವರ ಪ್ರತಿಸ್ಪರ್ಧಿಯಾಗಿ ಕಣದಲ್ಲಿದ್ದ ಬಿಜೆಪಿ ಬೆಂಬಲಿತ ಅಭ್ಯರ್ಥಿ 9 ಮತಗಳನ್ನು ಪಡೆದು ಪರಾಭವಗೊಂಡರು.

ಮೂಲತಃ ವಕೀಲರಾಗಿರುವ ಎಚ್ ಎನ್ ವಸಂತ ಕುಮಾರ್ ಈ ಹಿಂದೆ ಎರಡೂವರೆ ವರ್ಷಗಳ ಕಾಲ ಮೀನುಕುಂಟೆ ಗ್ರಾ.ಪಂ. ಉಪಾಧ್ಯಕ್ಷರಾಗಿ, ಅದೇ ಅವಧಿಯಲ್ಲಿ ಎರಡು ಬಾರಿ ಪ್ರಭಾರ ಅಧ್ಯಕ್ಷರಾಗಿ ಸೇವೆ ಸಲ್ಲಿಸಿರುವ ಹಿನ್ನೆಲೆ ಹೊಂದಿದ್ದಾರೆ.

ನೂತನ ಅಧ್ಯಕ್ಷ ಎಚ್ ಎನ್ ವಸಂತಕುಮಾರ್ ರವರನ್ನು ಗ್ರಾ.ಪಂ.ಸದಸ್ಯರು, ಕಾಂಗ್ರೆಸ್ ಮುಖಂಡರು, ಹಿತೈಷಿಗಳು ಅಭಿನಂದಿಸಿ ಶುಭ ಹಾರೈಸಿದರು.

ಈ ವೇಳೆ ನೂತನ ಅಧ್ಯಕ್ಷ ಎಚ್ ಎನ್ ವಸಂತ ಕುಮಾರ್ ಮಾತನಾಡಿ 'ಬ್ಯಾಟರಾಯನಪುರ ಶಾಸಕರು, ಕಂದಾಯ ಸಚಿವರಾದ ಕೃಷ್ಣಬೈರೇಗೌಡ ರವರ ಸಹಕಾರ, ಬೆಂಬಲದಿಂದಾಗಿ ಗ್ರಾ.ಪಂ.ಅಧ್ಯಕ್ಷ ರಾಗಿ ಆಯ್ಕೆಯಾಗಲು ಸಾಧ್ಯವಾ ಗಿದೆ. ನನ್ನ ಅಧಿಕಾರಾವಧಿಯಲ್ಲಿ ಅವರ ಸಲಹೆ, ಮಾರ್ಗದರ್ಶನ ದಲ್ಲಿ ಮೀನುಕುಂಟೆ ಗ್ರಾ.ಪಂ.ವ್ಯಾಪ್ತಿಯ ಗ್ರಾಮಗಳ ಸರ್ವಾಂಗೀಣ ಪ್ರಗತಿಗೆ ಪ್ರಾಮಾಣಿಕವಾಗಿ ಶ್ರಮಿಸುವುದಾಗಿ ತಿಳಿಸಿದರು.



ಸ್ಥಳೀಯ




ರಾಜ್ಯ ರಾಜಧಾನಿ ಬೆಂಗಳೂರು ದಿನದಿನಕ್ಕೂ ಬೆಳೆಯುತ್ತಿದೆ. ಉದ್ಯಾನನಗರಿ, ಸಿಲಿಕಾನ್ ಸಿಟಿ ಅಂತೆಲ್ಲ ಕರೆಸಿಕೊಂಡಿದ್ದ ಬೆಂಗಳೂರು ವಿಶ್ವದ ಪ್ರಮುಖ ನಗರಗಳಲ್ಲಿ ಒಂದು. ಯುವ ಜನರ, ಉದ್ಯಮಿಗಳ ನೆಚ್ಚಿನ ತಾಣ ಬೆಂಗಳೂರು. ಬಹುತೇಕ ಬೇರೆ ರಾಜ್ಯಗಳು, ವಿದೇಶಗಳಿಂದ ಬಂದ ಜನರ ಹಾಟ್ ಸ್ಪಾಟ್ ಆಗಿರೋ ಬೆಂಗಳೂರಲ್ಲಿ ಆಧುನಿಕ ಜೀವನ ಶೈಲಿ ಬಲವಾಗಿ ಬೇರೂರುತ್ತಿದೆ. ಆಧುನಿಕತೆಯ ಹೆಸರಲ್ಲಿ ಡ್ರಗ್ಸ್ ಪಾರ್ಟಿಯಂತ ಕಾನೂನು ಬಾಹೀರ ಚಟುವಟಿಕೆಗಳು ಯಥೇಚ್ಛವಾಗಿ ನಡೆಯುತ್ತದೆ. ಕೆಲ ಸ್ಟಾರ್ ಹೋಟೆಲ್‌ಗಳಲ್ಲಿ, ಫಾರ್ಮ್ ಹೌಸ್‌ಗಳಲ್ಲಿ ವಾರಾಂತ್ಯದಲ್ಲಷ್ಟೇ ಅಲ್ಲ, ವಾರದ ದಿನಗಳಲ್ಲೂ ಡ್ರಗ್ಸ್ ಪಾರ್ಟಿಗಳು, ರೇವ್ ಪಾರ್ಟಿಗಳು ನಡೆಯುತ್ತವೆ ಎನ್ನುವುದೇನು ಗುಟ್ಟಾಗಿಲ್ಲ. ಹಾಗಿದ್ರೆ ರೇವ್ ಪಾರ್ಟಿ ಎಂದರೇನು? ಪಾರ್ಟಿಗಳಿಗೆ ಡ್ರಗ್ಸ್‌ಗಳು ಹೇಗೆ ಸಪ್ಲೈ ಆಗುತ್ತವೆ? ಈ ಎಲ್ಲಾ ಮಾಹಿತಿ ಇಲ್ಲಿದೆ

ರೇವ್ ಪಾರ್ಟಿಗಳು ಡ್ರಗ್ಸ್, ಆಲ್ಕೋಹಾಲ್, ಲೈಂಗಿಕತೆ, ನೃತ್ಯ ಮತ್ತು ಸಂಗೀತವನ್ನು ಒಳಗೊಂಡಿರುವ ಭೂಗತ ಪಾರ್ಟಿಯೇ ರೇವ್ ಪಾರ್ಟಿ. ಅವು ಸಾಮಾನ್ಯವಾಗಿ ಮುಸ್ಸಂಜೆಯ ನಂತರ ಪ್ರಾರಂಭವಾಗುತ್ತವೆ, ಆದರೆ ಹೆಚ್ಚಾಗಿ ಮಧ್ಯರಾತ್ರಿಯ ನಂತರ ಮತ್ತು ಬೆಳಿಗ್ಗೆ ತನಕ ನಡೆಯುತ್ತವೇ ಇರುತ್ತವೆ.

ಬೆಂಗಳೂರಿನ ಪಾರ್ಟಿಗಳಲ್ಲಿ ಸಾಮಾನ್ಯವಾಗಿ 50 ರಿಂದ 100ಕ್ಕೂ ಹೆಚ್ಚು ಜನರಿರುತ್ತಾರೆ. ಪಾರ್ಟಿಗಳು ಸಾಮಾನ್ಯವಾಗಿ ಸಾವಿರಾರು ರೂಪಾಯಿಗಳಿಂದ ಪ್ರಾರಂಭವಾಗುತ್ತದೆ. ಅವುಗಳಲ್ಲಿ ಹೆಚ್ಚಿನವು ನಗರದ ಹೊರವಲಯದಲ್ಲಿ, ಹಳ್ಳಿಗಳಿಗೆ ಸಮೀಪದಲ್ಲಿ ಅಥವಾ ಫಾರ್ಮ್ ಹೌಸ್‌ಗಳಲ್ಲಿ ಅಥವಾ ದೂರದ ಓಪನ್ ಪ್ಲೇಸ್‌ಗಳಲ್ಲಿ ಆಯೋಜಿಸಲಾಗುತ್ತದೆ. ಕೆಲವೊಮ್ಮೆ ಕ್ಲಬ್‌ಗಳಲ್ಲಿ ಅಥವಾ ಮನೆಯಲ್ಲಿ ಆಯೋಜಿಸಲಾಗುತ್ತದೆ.

ಮೂಲತಃ ರೇವ್ ಸಂಸ್ಕೃತಿಯು ಅದರ ರೋಮಾಂಚಕ ಮತ್ತು ವರ್ಣರಂಜಿತ ವಾತಾವರಣಕ್ಕೆ ಹೆಸರುವಾಸಿಯಾಗಿದೆ,



ಪಾಲ್ಗೊಳ್ಳುವವರು ಸಾಮಾನ್ಯವಾಗಿ ಮಿನುಗುವ ಬಟ್ಟೆ, ನಿಯಾನ್ ಪರಿಕರಗಳು ಮತ್ತು ಗ್ಲೋ ಸ್ಟಿಕ್‌ಗಳನ್ನು ಧರಿಸುತ್ತಾರೆ. ರೇವ್ಸ್‌ನಲ್ಲಿನ ಬೆಳಕು ಮತ್ತು ದೃಶ್ಯ ಪರಿಣಾಮಗಳು ಸಾಮಾನ್ಯವಾಗಿ ವಿಸ್ತಾರವಾಗಿರುತ್ತವೆ, ಸ್ಟ್ರೋಬ್ ಲೈಟ್‌ಗಳು, ಲೇಸರ್‌ಗಳು ಅತಿವಾಸ್ತವಿಕ ವಾತಾವರಣವನ್ನು ಸೃಷ್ಟಿಸುತ್ತವೆ.

ರೇವ್ ಪಾರ್ಟಿಗಳು ಹಲವಾರು ಗಂಟೆಗಳು ಅಥವಾ ದಿನಗಳವರೆಗೆ ಇರುತ್ತದೆ, ಮತ್ತು ಪಾಲ್ಗೊಳ್ಳುವವರು ತಮ್ಮ ಅನುಭವವನ್ನು ಹೆಚ್ಚಿಸಲು ಅಥವಾ ಇತರ ಮತ್ತಿ ಬರಿಸೋ ಡ್ರಗ್ಸ್, ಔಷಧಿಗಳಂತಹ ವಸ್ತುಗಳನ್ನು ಬಳಸಬಹುದು, ಆದಾಗ್ಯೂ ಡ್ರಗ್ ಬಳಕೆ ರೇವ್ ಸಂಸ್ಕೃತಿಯ ಅಗತ್ಯ ಅಂಶವಲ್ಲ.

ಈ ಪಾರ್ಟಿಗಳಲ್ಲಿ ಭಾಗಿಯಾಗುವವರಿಗೆ ಗುಟ್ಟಾಗಿ ಸಂದೇಶ ತಲುಪಿಸಲಾಗುತ್ತದೆ. ವೈಯಕ್ತಿಕ ಮೇಲ್‌ಗಳು, ಮೊಬೈಲ್ ಸಂದೇಶಗಳ ಮೂಲಕ ಭಾಗವಹಿಸುವವರಿಗೆ ಆಹ್ವಾನಗಳನ್ನು ಕಳುಹಿಸಲಾಗುತ್ತದೆ. ಬೆಂಗಳೂರಿನಲ್ಲಿ ಒಂದೇ ಗುಂಪು ಸಾಮಾನ್ಯವಾಗಿ ಕಾಲಕಾಲಕ್ಕೆ ವಿವಿಧ ಸ್ಥಳಗಳಲ್ಲಿ ಪಾರ್ಟಿಗಳನ್ನು ಆಯೋಜಿಸುತ್ತದೆ.

ಡ್ರಗ್ಸ್ ಗಳಿಗೆ ಇಂತಿಷ್ಟೇ ಅಂತ ಬೆಲೆ ಇಲ್ಲ. ನೀವು ಎಷ್ಟು ಹಣ ನೀಡುತ್ತಿರೋ ಅದಕ್ಕೆ

ಬೆಂಗಳೂರಿನಲ್ಲಿ ರೇವ್‌ನಲ್ಲಿರುವ ಹೆಚ್ಚಿನ ಜನರು ಎಂಡಿಎಂಎ ಅಥವಾ ಆಸಿಡ್ ಅಥವಾ ಎರಡರ ಸಂಯೋಜನೆಯನ್ನು ಬಳಸುತ್ತಾರೆ. ಇದನ್ನು ಕ್ಯಾಂಡಿ ಫ್ಲಿಪ್" ಎಂದು ಕರೆಯಲಾಗುತ್ತದೆ.ಒಂದು ಸೈಕೋ ಆಕ್ಟಿವ್ ಡ್ರಗ್ ಆಗಿದ್ದು, ಆರರಿಂದ ಏಳು ಗಂಟೆಗಳ ಅವಧಿಯ ಪ್ರವಾಸವನ್ನು ಪ್ರೇರೇಪಿಸುತ್ತದೆ, ಅದು ನಿಮಗೆ ಶಕ್ತಿಯ ರಶ್ ನೀಡುತ್ತದೆ. ಅಂದರೆ ನಿಮಗೆ ನೃತ್ಯ ಮಾಡಲು ಅಥವಾ ಜಿಗಿಯಲು ಬಯಸುವಂತೆ ಮಾಡುತ್ತದೆ, ಬೆಳಕು ಮತ್ತು ಧ್ವನಿಗೆ ಹೆಚ್ಚಿದ ಸಂವೇದನೆ ಮತ್ತು ಪ್ರೀತಿ ಮತ್ತು ಯೂಫೋರಿಯಾದ ಪ್ರಬಲ ಭಾವನೆಗಳನ್ನು ನೀಡುತ್ತದೆ.

ತಕ್ಕನಾದ ಡ್ರಗ್ಸ್‌ಗಳು ಲಭ್ಯವಿರುತ್ತವೆ. ಕೇವಲ ನೂರರಿಂದ ಲಕ್ಷಾಂತರ ರೂಪಾಯಿಯ ಅಮಲು ಪದಾರ್ಥಗಳೂ ಕೂಡ ಸಿಗುತ್ತವೆ. ಎಕ್ಸ್‌ಟಸಿಯ ಒಂದು ಮಾತ್ರೆಯು ಪಾಪ್‌ಗೆ ರೂ 1200 ರಿಂದ ರೂ 1500 ರವರೆಗೆ ಎಲ್ಲಿ

**ರೇವ್ ಪಾರ್ಟಿಗಳು ಹಲವಾರು ಗಂಟೆಗಳು ಅಥವಾ ದಿನಗಳವರೆಗೆ ಇರುತ್ತದೆ, ಮತ್ತು ಪಾಲ್ಗೊಳ್ಳುವವರು ತಮ್ಮ ಅನುಭವವನ್ನು ಹೆಚ್ಚಿಸಲು ಅಥವಾ ಇತರ ಮತ್ತಿ ಬರಿಸೋ ಡ್ರಗ್ಸ್, ಔಷಧಿಗಳಂತಹ ವಸ್ತುಗಳನ್ನು ಬಳಸಬಹುದು, ಆದಾಗ್ಯೂ ಡ್ರಗ್ ಬಳಕೆ ರೇವ್ ಸಂಸ್ಕೃತಿಯ ಅಗತ್ಯ ಅಂಶವಲ್ಲ. ಈ ಪಾರ್ಟಿಗಳಲ್ಲಿ ಭಾಗಿಯಾಗುವವರಿಗೆ ಗುಟ್ಟಾಗಿ ಸಂದೇಶ ತಲುಪಿಸಲಾಗುತ್ತದೆ. ವೈಯಕ್ತಿಕ ಮೇಲ್‌ಗಳು, ಮೊಬೈಲ್ ಸಂದೇಶಗಳ ಮೂಲಕ ಭಾಗವಹಿಸುವವರಿಗೆ ಆಹ್ವಾನಗಳನ್ನು ಕಳುಹಿಸಲಾಗುತ್ತದೆ. ಬೆಂಗಳೂರಿನಲ್ಲಿ ಒಂದೇ ಗುಂಪು ಸಾಮಾನ್ಯವಾಗಿ ಕಾಲಕಾಲಕ್ಕೆ ವಿವಿಧ ಸ್ಥಳಗಳಲ್ಲಿ ಪಾರ್ಟಿಗಳನ್ನು ಆಯೋಜಿಸುತ್ತದೆ.**



ಬೇಕಾದರೂ ವೆಚ್ಚವಾಗಬಹುದು. ಸಿಗರೇಟ್ ಪ್ಯಾಕ್‌ಗಿಂತ ಅಗ್ಗವಾಗಿಯೂ ಸಿಗುತ್ತಂತೆ.

ಬೆಂಗಳೂರಿನಲ್ಲಿ ರೇವ್‌ನಲ್ಲಿರುವ ಹೆಚ್ಚಿನ ಜನರು ಎಂಡಿಎಂಎ ಅಥವಾ ಆಸಿಡ್ ಅಥವಾ ಎರಡರ ಸಂಯೋಜನೆಯನ್ನು ಬಳಸುತ್ತಾರೆ. ಇದನ್ನು ಕ್ಯಾಂಡಿ ಫ್ಲಿಪ್" ಎಂದು ಕರೆಯಲಾಗುತ್ತದೆ.ಒಂದು ಸೈಕೋ ಆಕ್ಟಿವ್ ಡ್ರಗ್ ಆಗಿದ್ದು, ಆರರಿಂದ ಏಳು ಗಂಟೆಗಳ ಅವಧಿಯ ಪ್ರವಾಸವನ್ನು ಪ್ರೇರೇಪಿಸುತ್ತದೆ, ಅದು ನಿಮಗೆ ಶಕ್ತಿಯ ರಶ್ ನೀಡುತ್ತದೆ. ಅಂದರೆ ನಿಮಗೆ ನೃತ್ಯ ಮಾಡಲು ಅಥವಾ ಜಿಗಿಯಲು ಬಯಸುವಂತೆ ಮಾಡುತ್ತದೆ, ಬೆಳಕು ಮತ್ತು ಧ್ವನಿಗೆ ಹೆಚ್ಚಿದ ಸಂವೇದನೆ ಮತ್ತು ಪ್ರೀತಿ ಮತ್ತು ಯೂಫೋರಿಯಾದ ಪ್ರಬಲ ಭಾವನೆಗಳನ್ನು ನೀಡುತ್ತದೆ. ಆಮ್ಲವು ಭ್ರಮೆ ಹುಟ್ಟಿಸುವ ವಸ್ತುವಾಗಿದ್ದು, ನಿಮ್ಮ ಸುತ್ತಲಿನ ಪ್ರಪಂಚವನ್ನು ನೀವು ಮಾನಸಿಕವಾಗಿ ಮತ್ತು ದೈಹಿಕವಾಗಿ ಗ್ರಹಿಸುವ ವಿಧಾನವನ್ನು ಬದಲಾಯಿಸುತ್ತದೆ.

ಆಸಿಡ್ ಟ್ರಿಪ್ 10–12 ಗಂಟೆಗಳವರೆಗೆ ಇರುತ್ತದೆ ಮತ್ತು ಆಳವಾದ ಚಿಂತನಶೀಲ ಮತ್ತು ಆಧ್ಯಾತ್ಮಿಕ ಅನುಭವವೂ ಆಗಿರಬಹುದು. ಎರಡನ್ನು ಮಿಶ್ರಣ ಮಾಡುವುದು, ಅಥವಾ "ಕ್ಯಾಂಡಿ–ಫ್ಲಿಪ್ಪಿಂಗ್" ತೀವ್ರವಾಗಿ ಸಂತೋಷವನ್ನು ಉಂಟುಮಾಡುತ್ತದೆ, ಕೆಲವೊಮ್ಮೆ ಅಗಾಧವಾಗಿ, ಈ ಎರಡು ಅನುಭವಗಳ ಸಂಶ್ಲೇಷಣೆ. ಚಲಿಸುವ ಲೈಟ್‌ಗಳು, ಸಂಗೀತ ಮತ್ತು ತಮ್ಮದೇ ಚರ್ಮದ ಸಂವೇದನೆಯಿಂದ ಜನರು ಅಸಾಮಾನ್ಯವಾಗಿ ಮಂತ್ರಮುಗ್ಧರಾಗಿರುವುದು ರೇವ್‌ಗಳಲ್ಲಿ ಅಸಾಮಾನ್ಯವೇನಲ್ಲ.ದೆಹಲಿಯ ಹ್ಯಾಶಿಶ್ ಅಥವಾ ಮುಂಬೈನ ಕುಖ್ಯಾತ ಮಿಯಾವ್ ಅಗ್ಗದ ಎರಡನೇ ಸೋದರಸಂಬಂಧಿ) ನಂತಹ ಇತರ ನಗರಗಳಲ್ಲಿ ಕೆಲವು ಔಷಧಿಗಳು ಅಗ್ಗ ಅಥವಾ ಸುಲಭವಾಗಿ ಸಿಗುತ್ತವೆ, ನಿಮ್ಮ ಸಂಪರ್ಕಗಳು ಮತ್ತು ಹಣವನ್ನು ಹೊಂದಿದ್ದರೆ, ಅದೃಷ್ಟವಶಾತ್ ಅಥವಾ ದುರದೃಷ್ಟವಶಾತ್, ಬೆಂಗಳೂರು ನಿಮಗೆ ಅಗತ್ಯವಿರುವ ಎಲ್ಲವನ್ನೂ ಹೊಂದಿದೆ.

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ–ಪೇಪರ್: www.munjaneevartheepaper.com
27 MONDAY MAY 2024
27 ಸೋಮವಾರ ಮೇ 2024

# ನೀತಿ ಸಂಹಿತೆ ಉಲ್ಲಂಘನೆ : ಪ್ರೆಸಿಡೆನ್ಸಿ ಯೂನಿವರ್ಸಿಟಿ ವಿರುದ್ಧ ದೂರು

ಯಲಹಂಕ: ರಾಜ್ಯದಲ್ಲಿ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿದ್ದು, ನೀತಿ ಸಂಹಿತೆ ಅವಧಿ ಮುಕ್ತಾಯವಾಗುವವರೆಗೂ ಯಾವುದೇ ಬೃಹತ್ ಕಾರ್ಯಕ್ರಮ ಗಳನ್ನು ಆಯೋಜಿಸಬಾರದು ಎಂಬ ನಿಯಮವಿದ್ದರೂ ಸಹ ಇಲ್ಲಿನ ರಾಜಾನುಕುಂಟೆ–ಕಾಕೋಳು ರಸ್ತೆಯ ದಿಬ್ಬೂರು ಸಮೀಪವಿರುವ ಪ್ರೆಸಿಡೆನ್ಸಿ ಯೂನಿವರ್ಸಿಟಿ ಯವರು ಯಾವುದೇ ರೀತಿಯ ಅನುಮತಿ ಪಡೆಯದೆ, 40 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳನ್ನು ಆಹ್ವಾನಿಸಿ ಅಂತರ್ ಕಾಲೇಜು ಫೆಸ್ಟ್ ಆಯೋಜಿಸಿರುವುದರ ವಿರುದ್ಧ ಸ್ಥಳೀಯ ಗ್ರಾಮಸ್ಥರು
ಹಾಗೂ ಬಿಜೆಪಿ ರೈತ ಮೋರ್ಚಾದ ವತಿಯಿಂದ ಬೆಂಗಳೂರು ನಗರ ಜಿಲ್ಲಾಧಿಕಾರಿಗಳು, ಚುನಾವಣಾಧಿಕಾ
ರಿಗಳು, ಯಲಹಂಕ ತಹಶಿಲ್ದಾರರು, ಎಸ್ ಪಿ ಕಚೇರಿ ಸೇರಿದಂತೆ ವಿವಿಧ ಅಧಿಕಾರಿಗಳಿಗೆ ದೂರು ನೀಡಿ ಕಾರ್ಯಕ್ರಮ




ರದ್ದುಗೊಳಿಸುವಂತೆ ಕೋರಿರುವ ಘಟನೆ




ನಡೆದಿದೆ.

ಮೇ.24 ಮತ್ತು25ರಂದು ಪ್ರೆಸಿಡೆನ್ಸಿ ಯೂನಿವರ್ಸಿಟಿ ಆವರಣದಲ್ಲಿ 40 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿ ಗಳನ್ನು ಆಹ್ವಾನಿಸಿ, ಸಿನಿ ತಾರೆಯರನ್ನು ಕರೆಸಿ, ಅಂತರ್ ಕಾಲೇಜು ಫೆಸ್ಟ್ ಆಯೋಜಿಸಿರುವುದರಿಂದ ಸುತ್ತಮುತ್ತಲಿನ ಗ್ರಾಮಗಳಲ್ಲಿ ಸಂಚಾರ ದಟ್ಟಣೆ ಹೆಚ್ಚಾಗುತ್ತದೆ. ಕಾರ್ಯಕ್ರಮದಲ್ಲಿ ಮೊಳಗಿಸುವ ಧ್ವನಿವರ್ಧಕಗಳು, ಡಿಜೆ ಸಂಗೀತದ ಧ್ವನಿಗೆ ಗ್ರಾಮಸ್ಥರಿಗೆ ಶಾಂತಿಭಂಗ ಉಂಟಾಗುವುದರ ಜತೆಗೆ ಗ್ರಾಮೀಣ ರೈತರು ಸಾಕಿ ರುವ ಹಸುಗಳು, ಕುರಿ, ಮೇಕೆ, ಕೋಳಿ ಮುಂತಾದ ಸಾಕು ಪ್ರಾಣಿಗಳು ಕಟ್ಟಿರುವ ಹಗ್ಗದಿಂದ ಕಿತ್ತುಕೊಂಡು ನಾಪತ್ತೆಯಾಗುವ ಪ್ರಸಂಗವಿರುವ ಕಾರಣ, ನಿಯೋಜಿತ ಕಾರ್ಯಕ್ರಮವನ್ನು ರದ್ದುಗೊಳಿಸಬೇಕೆಂದು ರೈತ ಮೋರ್ಚಾ ರಾಜ್ಯ ಕಾರ್ಯದರ್ಶಿ ಸತೀಶ್ ಕಡತನಮಲೆ, ಸ್ಥಳೀಯ ರೈತ ಮುಖಂಡರಾದ ಇಟಗಲ್ ಪುರ ಮೋಹನ್, ಎಸ್.ಜಿ.ನರಸಿಂಹ ಮೂರ್ತಿ, ಕೆ ಆರ್ ತಿಮ್ಮೇಗೌಡ, ಎಸ್ ಜಿ ಪ್ರಶಾಂತ್ ರೆಡ್ಡಿ, ಅದ್ದೆ ವಿಶ್ವನಾಥಪುರ ಮಂಜುನಾಥ್, ದಿಬ್ಬೂರು ಹೇಮತಕುಮಾರ್, ಚೊಕ್ಕನಹಳ್ಳಿ ನಾಗೇಶ್, ಶ್ಯಾನುಭೋಗನಹಳ್ಳಿ ಮಂಜು ಸೇರಿದಂತೆ ಸ್ಥಳೀಯ ಗ್ರಾಮಸ್ಥರು ಅಧಿಕಾರಿಗಳಿಗೆ ಮನವಿ ಮಾಡಿದ್ದಾರೆ.

ಕಳೆದ ವರ್ಷ ಇದೇ ಅವಧಿಯಲ್ಲಿ ಪ್ರೆಸಿಡೆನ್ಸಿ ಯೂನಿವಸಿ
ಟಿಯಲ್ಲಿ ನಡೆದ ಅಂತರ್ ಕಾಲೇಜು ಫೆಸ್ಟ್ ನಿಂದಾಗಿ ಈ ಭಾಗದಲ್ಲಿ ಬಹುದೊಡ್ಡ ಅವಾಂತರವೇ ಸೃಷ್ಟಿಯಾಗಿತ್ತು, ಅಲ್ಲಿನ ಸದ್ದುಗದ್ದಲಕ್ಕೆ ಗ್ರಾಮೀಣ ಜನತೆಗೆ ಶಾಂತಿಭಂಗದ ಜತೆಗೆ ರೈತರ ಹಲವು ಸಾಕುಪ್ರಾಣಿಗಳು ಕಟ್ಟಿದ ಕಣ್ಣಿ ಕಿತ್ತುಕೊಂಡು ನಾಪತ್ತೆಯಾಗಿದ್ದವು. ರೈತರು ಬೆಳೆದ ತರಕಾರಿ ಬೆಳೆಗಳನ್ನು ಸೂಕ್ತ ಸಮಯದಲ್ಲಿ ಮಾರುಕಟ್ಟೆಗೆ ಸಾಗಿಸಲು ಅಡಚಣೆ ಉಂಟಾಗಿತ್ತು.

ಮಾದಕ ವ್ಯಸನಿ ವಿದ್ಯಾರ್ಥಿಗಳು ರಸ್ತೆ ಮಧ್ಯದಲ್ಲೇ ವಾಹನ ಗಳನ್ನು ನಿಲ್ಲಿಸಿ, ಹುಚ್ಚಾಟ ಮೆರೆದಿದ್ದನ್ನು ನೋಡಿದ್ದ ಪೊಲೀಸ್ ಅಧಿಕಾರಿಗಳು ಇನ್ನು ಮುಂದೆ ಇಲ್ಲಿ ಇಂತಹ ಬೃಹತ್ ಕಾರ್ಯಕ್ರಮ ಆಯೋಜಿಸದಂತೆ ಎಚ್ಚರಿಕೆ ನೀಡಿದ್ದರು.

ಆದರೆ ಇದ್ಯಾವುದನ್ನೂ ಲೆಕ್ಕಿಸದೆ ಪುನಃ ಈ ವರ್ಷ ಚುನಾವಣಾ ನೀತಿ ಸಂಹಿತೆ ಉಲ್ಲಂಘಿಸಿ, ಯಾವುದೇ ರೀತಿಯ ಅನುಮತಿಯನ್ನು ಪಡೆಯದೆ ಕಾರ್ಯಕ್ರಮ ಆಯೋಜಿಸಿರುವ ಪ್ರೆಸಿಡೆನ್ಸಿ ಯೂನಿವರ್‌ಸಿಟಿ ಆಡಳಿತ ಮಂಡಳಿ ವಿರುದ್ಧ ಜಿಲ್ಲಾಧಿಕಾರಿಗಳು, ಚುನಾವಣಾ ಅಧಿಕಾರಿಗಳು, ತಹಶಿಲ್ದಾರರು ಸೂಕ್ತ ಕಾನೂನು ಕ್ರಮ ಕೈಗೊಳ್ಳುವುದರ ಜತೆಗೆ ನಿಯೋಜಿತ ಅಂತರ್ ಕಾಲೇಜು ಫೆಸ್ಟ್ ಕಾರ್ಯಕ್ರಮವನ್ನು ರದ್ದುಗೊಳಿಸುವ ಮೂಲಕ ಈ ಭಾಗದ ಗ್ರಾಮಸ್ಥರ ನೆರವಿಗೆ ಬರಬೇಕು ಎಂಬುದು ರೈತ ಮುಖಂಡರ ಮನವಿಯಾಗಿದೆ.



## ಸೈನಿಕರು ಆರೋಗ್ಯ ನಿರ್ಲಕ್ಷಿಸಬಾರದು: ಡಾ. ದೇವಗೌಡ

ಬೆಳಗಾವಿ: ಮಾನಸಿಕ ಒತ್ತಡವನ್ನು ಸೈನಿಕರು ನಿರ್ಲಕ್ಷಿಸಿದರೆ ತಮ್ಮ ಸಮಗ್ರ ಆರೋಗ್ಯ ಮತ್ತು ಕೌಟುಂಬಿಕ, ಸಾಮಾಜಿಕ ಹಾಗೂ ವೃತ್ತಿ ಜೀವನದ ಮೇಲೆ ವ್ಯತಿರಿಕ್ತ ಪರಿಣಾಮಗಳಾಗುತ್ತವೆ ಎಂದು ನಗರದ ಕಾಲೇಜು ರಸ್ತೆಯ ಆರ್ಥೋ ಸರ್ಜನ್ ಹಾಗೂ ನಿರ್ದೇಶಕ ಡಾ. ಐ. ದೇವಗೌಡ ತಿಳಿಸಿದರು.

ನಗರದ ಮರಾಠಾ ಲಘು ಪದಾತಿದಳದ ಯಶವಂತ ಘಾಡಗೆ ಸಭಾಂಗಣದಲ್ಲಿ ಸೈನ್ಯಾಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದರು. ಸೈನಿಕರಿಗೆ ಆಗುವ ಮಾನಸಿಕ ಒತ್ತಡ ಹಾಗೂ ನೋವುಗಳ ಬಗ್ಗೆ ಶುಕ್ರವಾರ ಆಯೋಜಿಸಲಾದ ಸಂವಾದ, ಚಿಕಿತ್ಸಾ ಕಾರ್ಯಕ್ರಮದಲ್ಲಿ ಮಾತನಾಡಿದರು. ಸೈನಿಕರು ಕರ್ತವ್ಯ ನಿರ್ವಹಿಸುವಾಗ, ಆರ್ಮಿ ಟ್ರೇನಿಂಗ್ ಅವಧಿಯಲ್ಲಿ, ಯುದ್ಧ ಹಾಗೂ ಪ್ರಕ್ಷುಬ್ಧ ಸ್ಥಿತಿ ಮತ್ತು ಸನ್ನಿವೇಶಗಳನ್ನು ಎದುರಿಸುವಾಗ ಆಗುವ ದೈಹಿಕ ನ್ಯೂನ್ಯತೆಗಳು ಮತ್ತು ಮಾನಸಿಕ ಖಿನ್ನತೆ, ಆಘಾತಗಳನ್ನು ನಿರ್ವಹಿಸುವ ಬಗೆಗೆ ಹಲವು ಉದಾಹರಣೆಗಳ ಮೂಲಕ ಸೈನಿಕರಿಗೆ ಡಾ. ದೇವಗೌಡ ಮನವರಿಕೆ ಮಾಡಿದರು.



ಸೈನಿಕರು ಇಳಿಯುವ, ಏರುವ, ಜಿಗಿಯುವ ಹಲವಾರು ದೈಹಿಕ ಪರಿಶ್ರಮ ಪಡುವಾಗ ಅಗತ್ಯವಾಗಿ ಎಚ್ಚರ ವಹಿಸಬೇಕಾದ ದೈಹಿಕ ಎಚ್ಚರಿಕೆಗಳು, ಮೊಣಕಾಲು, ಮೊಣಕೈ, ಹೊಟ್ಟೆ, ಭುಜ ಹಾಗೂ ತಲೆಗೆ ಹಾನಿಯಾಗದಂತೆ ಬಳಸುವ ಪಟುತ್ವವನ್ನು ದೇವಗೌಡ ತಿಳಿಸಿಕೊಟ್ಟರು.

ಬಿಸಿಗಾಳಿ, ಶೀತಗಾಳಿಯಿಂದ ಆಗುವ ದೇಹದ ಆಲಸ್ಯ, ಖಿನ್ನತೆ, ಗಡಿಯಲ್ಲಿ ಅನುಭವಿಸುವ ಒಂಟಿತನ, ನಿದ್ರಾಹೀನತೆ, ಮಾನಸಿಕ ಗೊಂದಲ ನಿರ್ವಹಿಸುವ ಬಗೆ ಸೈನಿಕರು ವೈದ್ಯಕೀಯವಾಗಿ ತಿಳಿದುಕೊಳ್ಳಬೇಕು. ಸೇವೆಯಿಂದ ನಿರ್ಗಮಿಸುವ ಸೈನಿಕರು ವ್ಯಾಯಾಮವನ್ನು ಒಮ್ಮೆಲೆ ಬಿಡದೇ ಹಂತಹಂತವಾಗಿ ಕಡಿಮೆ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಯೋಧರಿಗೆ ಇದೇ ಸಂದರ್ಭ ಬೋನ್ ಡೆನ್ಸಿಟಿ ತಪಾಸಣೆ ನಡೆಸಲಾಯಿತು. ಕ್ಯಾಪ್ಟನ್ ಹರಿದಾಸ ನವಲೆ, ಕ್ಯಾಪ್ಟನ್ ದಾನೋಜಿ ಜಗದಾಳೆ, ಸುಬೇದಾರ ವಿನೋದ ಪಾಟೀಲ, ಸುಬೇದಾರ ಮಹೇಶ ಅಮರೋಳಕರ ಸೇರಿ 200ಕ್ಕೂ ಹೆಚ್ಚು ಯೋಧರು ಭಾಗವಹಿಸಿದ್ದರು.



## ಅನುದಾನದ ಕೊರತೆಯಿಂದ ದುರಸ್ತಿ ಕಾರ್ಯ ವಿಳಂಬ



ಮಧುಗಿರಿ: ಶಿಥಿಲವಾಗಿರುವ ದಂಡೂರು ಬಾಗಿಲ ಕೋಟೆ ಹಾಗೂ ಮೇಲ್ಚಾವಣಿಯನ್ನು ಕೂಡಲೆ ದುರಸ್ತಿ ಮಾಡುವಂತೆ ಸಂಬಂಧಪಟ್ಟ ಇಲಾಖಾಧಿಕಾರಿಗಳಿಗೆ ವಿಧಾನ ಪರಿಷತ್ ಸದಸ್ಯ ರಾಜೇಂದ್ರ ರಾಜಣ್ಣ ಸೂಚಿಸಿದರು.

ಪಟ್ಟಣದ ಶಿರಾಗೇಟ್ ಬಳಿಯಿರುವ ಪುರಾತನ ಕಾಲದ ದಂಡೂರು ಬಾಗಿಲ ಸ್ಥಿತಿ ಗತಿಗಳನ್ನು ಖುದ್ದು ಪರಿಶೀಲಿಸಿ ಮಾತನಾಡಿದ ಅವರು, ಎರಡು ವರ್ಷಗಳ ಹಿಂದೆಯೇ ದಂಡೂರು ಬಾಗಿಲು ಮಳೆಯ ಕಾರಣದಿಂದ ಶಿಥಿಲವಾಗಿದ್ದು ಅಂದೂ ಸಹ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಲಾಗಿತ್ತು. ಅನುದಾನದ ಕೊರತೆಯಿಂದಾಗಿ ದುರಸ್ತಿ ಕಾರ್ಯ ವಿಳಂಬ ವಾಗಿದೆ.

ಈಗ ಮತ್ತೆ ಮಳೆಗಾಲ ಆರಂಭವಾಗಿರುವುದರಿಂದ ಕೋಟೆ ಮತ್ತು ಬಾಗಿಲ ಮೇಲ್ಚಾವಣಿಯ ದುರಸ್ತಿಗೆ ಈಗಾಗಲೇ ಅಧಿಕಾರಿಗಳಿಗೆ ಸೂಚಿಸಿದ್ದೇನೆ ನಾಳೆಯಿಂದಲೇ ಕೋಟೆಯ ಸಂರಕ್ಷಣೆ ಮತ್ತು ದುರಸ್ತಿ ಕಾರ್ಯ ಆರಂಭಿಸಲಾಗುವುದು.

ಬಾಗಿಲ ಸುತ್ತ ಮುತ್ತ ಬಿದ್ದಿರುವ ಕಸ ಕಡ್ಡಿಗಳನ್ನು ತೆಗೆದು ಸ್ವಚ್ಚತೆಗೆ ಆದ್ಯತೆ ನೀಡಬೇಕು ಹಾಗೂ ಹಳೆಯ ಕಲ್ಲುಗಳನ್ನು ತೆಗೆದು ಹೊಸ ಕಲ್ಲುಗಳನ್ನು ಕೋಟೆಗೆ ಆಳವಡಿಸಿ ಸ್ಮಾರಕ ರಕ್ಷಣೆಗೆ ಅಧಿಕಾರಿಗಳು ಮುಂದಾಗ ಬೇಕೆಂದರು.

ರಾಜೇಂದ್ರ ಸೂಚನೆಯ ಮೇರೆಗೆ ಪುರಸಭೆಯವರು ಬಾಗಿಲ ಮೇಲ್ಚಾವಣಿಯಲ್ಲಿ ಬೆಳದಿದ್ದ ಅನಗತ್ಯ ಗಿಡಗೆಂಟೆಗಳನ್ನು ಈಗಾಗಲೇ ತೆಗೆದು ಹಾಕಲಾಗಿದ್ದು ಮೇಲ್ಚಾವಣಿಯ ಮೇಲೆ ಮಳೆಯ ನೀರು ನಿಲ್ಲದಂತೆ ಕಾಂಕ್ರೀಟ್ ಹಾಕಲಾಗುವುದೆಂದು ಪುರಸಭಾ ಅಧಿಕಾರಿಗಳು ತಿಳಿಸಿದ್ದಾರೆ.

ನಂತರ ಅರಣ್ಯ ಇಲಾಖೆಯ ಸಮೀಪವಿರುವ ಈಗಾಗಲೇ ಶಿಥಿಲಾವ್ಯಸ್ಥೆ ತಲುಪಿರುವ ಮೂರು ಪೊಲೀಸ್ ವಸತಿ ಗೃಹಗಳನ್ನು ತೆರವು ಗೊಳಸಿ ಪಟ್ಟಣದ ಹತ್ತು ವಾರ್ಡ್ ಗಳ ನಾಗರೀಕರಿಗೆ ಅನೂಕೂಲವಾಗುವಂತೆ ಕೋಟೆಯ ಮುಂಭಾಗದಲ್ಲಿ ಸುಂದರವಾದ ಉದ್ಯಾವನವನ್ನು ನಿರ್ಮಿಸಿ ಕೊಡುವಂತೆ ಪುರಸಭಾ ಸದಸ್ಯ ಅಲೀಂ ರಾಜೇಂದ್ರ ರವರ ಬಳಿ ಮನವಿ ಮಾಡಿದರು ಇದಕ್ಕೆ ಪೂರಕವಾಗಿ ಸ್ಪಂದಿಸಿದ ವಿಧಾನ ಪರಿಷತ್ ಸದಸ್ಯರು ಪಟ್ಟಣದ ನಾಗರೀಕರಿಗೆ ಅನೂಕೂಲವಾಗುವಂತೆ ಸಕಲ ಸೌಲಭ್ಯ ವುಳ್ಳ ಉದ್ಯಾವನ ನಿರ್ಮಾಣಕ್ಕೆ ಪುರಸಭೆಯ ವತಿಯಿಂದ ಕ್ರಮಕೈಗೊಳ್ಳುವ ಭರವಸೆ ನೀಡಿದರು.

ತಾಲ್ಲೂಕಿನ ಮಿಡಿಗೇಶಿ ಹೋಬಳಿಯ ಬೇಡತ್ತೂರು, ಹನುಮಂತಪುರ, ಹೊಸಕೆರೆ ಗ್ರಾಮಗಳಲ್ಲಿನ ಕೆರೆಗಳ ಪರಿಸ್ಥಿತಿಯನ್ನು ತಿಳಿದು ಕೆರೆಗಳ ತೂಬುಗಳು, ಕೋಡಿ ಹರಿಯುವ ಜಾಗಗಳ ದುರಸ್ತಿ ಮತ್ತು ಸಂರಕ್ಷಣೆಗೆ ಅಗತ್ಯವಾಗಿರುವ ಅನುದಾನದ ಪಟ್ಟಿ ಮಾಡಿ ನೀಡಿದರೆ ಸಂಬಂಧಪಟ್ಟ ಸಚಿವರು ಮತ್ತು ಅಧಿಕಾರಿಗಳೊಂದಿಗೆ ಚರ್ಚಿಸಿ ಹಣ ಬಿಡುಗಡೆ ಮಾಡಿಸುವುದಾಗಿ ತಿಳಿಸಿದರು.

ಮಿಡಿಗೇಶಿ ಗ್ರಾಮದಲ್ಲಿನ ಮೇವು ಬ್ಯಾಂಕಿಗೆ ಭೇಟಿ ನೀಡಿ ಜಾನುವಾರುಗಳ ಮೇವು ವಿತರಣೆ ಯಾಗುತ್ತಿರುವ ಬಗ್ಗೆ ರೈತರು ಹಾಗೂ ಅಧಿಕಾರಿಗಳೊಂದಿಗೆ ಚರ್ಚಿಸಿ ಗುಣಮಟ್ಟದ ಮೇವು ವಿತರಣೆ ಗೆ ಅಧಿಕಾರಿಗಳು ಮುಂದಾಗ ಬೇಕು ಹಾಗೂ ಮೇವು ವಿತರಣೆಯಲ್ಲಿ ಯಾವುದೇ ಲೋಪ ದೋಷ ಉಂಟಾಗದಂತೆ ಕ್ರಮ ಕೈಗೊಳ್ಳುವಂತೆ ಕೃಷಿ ಮತ್ತು ಪಶುಪಾಲನೆ ಇಲಾಖಾಧಿಕಾರಿಗಳಿಗೆ ಸೂಚಿಸಿದರು.

ಪುರಸಭಾ ಸದಸ್ಯ ಲಾಲಪೇಟೆ ಮಂಜುನಾಥ್ , ಆಚಾರ್ ಮಂಜುನಾಥ್ , ಮಾಜಿ ಸದಸ್ಯ ಶಫೀಕ್ , ಸಾಧಿಕ್ , ಮಾಜಿ ಜಿ.ಪಂ ಸದಸ್ಯರುಗಳಾದ ಜಿ.ಜೆ ರಾಜಣ್ಣ, ಎಂ ಎಸ್ ಮಲ್ಲಿಕಾರ್ಜುನಯ್ಯ ಹಾಗೂ ಜಿಪಂ ಹಾಗೂ ಸಣ್ಣ ನೀರಾವರಿ ಇಲಾಖೆಯ ಅಧಿಕಾರಿಗಳು ಮತ್ತು ಗ್ರಾಮಸ್ಥರು ಹಾಜರಿದ್ದರು.

## ದ್ರೌಪದಮ್ಮ ದೇವಿ ಕರಗ



ಆನೇಕಲ್: ಗತವೈಭವ ಮೆರೆದ ಆನೇಕಲ್ನ ಕರಗ ಮಹೋತ್ಸವ ಆನೇಕಲ್ ನಗರದ ಬೀದಿ ಬೀದಿಗಳಲ್ಲಿ ವಿಜೃಂಭಣೆಯಿಂದ ದ್ರೌಪದಮ್ಮ ದೇವಿ ಕರಗ ರಾರಾಜಿಸಿತು.

ನಾಲ್ಕು ದಿನ ನಡೆಯುವ ಈ ಕರಗ ಮಹೋತ್ಸವ ಬಹಳಷ್ಟು ಪುರಾತನ ಇತಿಹಾಸವಿರುವ ಆನೇಕಲ್ ಕರಗ ಬೆಂಗಳೂರು ಕರಗದಷ್ಟೇ ಪ್ರಸಿದ್ಧಿಯಾಗಿದೆ.

ಈ ಕಗರವನ್ನು ನೋಡಲು ಅನೇಕ ಊರುಗಳಿಂದ ಜನ ದಂಡೋಪದಂಡವಾಗಿ ಆನೇಕಲ್‌ನ ಕಡೆ ಧಾವಿಸಿ ಬರುತ್ತಾರೆ. ಈ ನಾಲ್ಕು ದಿನಗಳ ಮಹೋತ್ಸವ ದ ಮೊದಲ ದಿನವಾದ ಇಂದು ಬೆಳಗ್ಗೆ ಸುಮಾರು 7ಗಂಟೆಗೆ ತನಕ ದ್ರೌಪದಮ್ಮ ದೇವಿ ಕರಗ ನಡೆಯಿತು. ನಗರದ ಪ್ರಮುಖ ಬೀದಿಗಳಲ್ಲಿ ಹರಿದಾಡಿ ಸುಮಾರು 7 ಘಂಟೆ ಸಮಯಕ್ಕೆ ಮರಳಿ ದೇವಾಲಯ ತಲುಪಿತು ಈ ಮೊದಲ ದಿನದ ಕರಗವನ್ನು ಹಸಿ ಕರಗ ಎಂದು ಹೇಳಲಾಗುತ್ತದೆ.

ಈ ದ್ರೌಪದಮ್ಮ ದೇವಿ ಕರಗ ಪ್ರತಿಬಾರಿಗಿಂತ ಈ ಬಾರಿ ಬಹಳ ಚೆನ್ನಾಗಿ ಮೂಡಿಬಂದಿದೆ ಇದೇರೀತಿ ಪ್ರತಿಬಾರಿಯು ಈ ಕರಗ ಮಹೋತ್ಸವ ನಡೆದುಕೊಂಡು ಹೋಗಬೇಕು ಎಂಬುದು ಆನೇಕಲ್ ಜನತೆಯ ಮಾತಾಗಿದೆ.

## ವೆಂಕಟರಮಣಸ್ವಾಮಿ ದೇವಾಲಯಕ್ಕೆ ಭೇಟಿ ನೀಡಿದ ಡಿಸಿ



ಬಾಗೇಪಲ್ಲಿ: ಗಡಿದಂ ಲಕ್ಷ್ಮೀವೆಂಕಟರಮಣಸ್ವಾಮಿ ಬ್ರಹ್ಮರಥೋತ್ಸವದ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ ಭೇಟಿ ನೀಡಿ ದೇವರಿಗೆ ವಿಶೇಷ ಪೂಜೆ ಸಲ್ಲಿಸಿದರು.

ತಾಲೂಕಿನ ಐತಿಹಾಸಿಕ ದೇವರಗುಡಿಪಲ್ಲಿ ಗಡಿದಂ ಲಕ್ಷ್ಮೀ ವೆಂಕಟರಮಣಸ್ವಾಮಿ ಬ್ರಹ್ಮರಥೋತ್ಸವವು ಗುರುವಾರ ಅದ್ದೂರಿಯಾಗಿ ಸಾವಿರಾರು ಭಕ್ತರ ಸಮ್ಮುಖದಲ್ಲಿ ನಡೆಯಿತು. ಇದರ ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ,ಅಪರ ಜಿಲ್ಲಾಧಿಕಾರಿ ತಿಪ್ಪೇಸ್ವಾಮಿ ಮತ್ತಿತರರು ಭೇಟಿ ನೀಡಿ ದೇವರಿಗೆ ಮತ್ತು ರಥಕ್ಕೆ ವಿಶೇಷ ಪೂಜೆ ಸಲ್ಲಿಸಿದರು.

ಈ ವೇಳೆ ತಹಶೀಲ್ದಾರ್ ಪ್ರಶಾಂತ್ ಕೆ ಪಾಟೀಲ, ಗ್ರೇಡ್ –2 ತಹಶೀಲ್ದಾರ್ ಸುಬ್ರಮಣ್ಯ ಸೇರಿದಂತೆ ಹಲವು ಅಧಿಕಾರಿಗಳು ಇದ್ದರು.



ತಿಪಟೂರು: ತಾಲೂಕಿನ ಕಸಬಾ ಹೋಬಳಿಯ ಬಿದಿರೆಗುಡಿ ಗ್ರಾಮದ 65 ಹಳ್ಳಿಯ 3000 ಸೀಮೆ ನಾಡ ದೇವತೆಯಾದ ಬಿದರಾಂಬಿಕ ದೇವಿಯ ಜಾತ್ರಾ ಮಹೋತ್ಸವ ಅಂಗವಾಗಿ ಆರತಿ ಬಾನ ಕಾರ್ಯಕ್ರಮದ ಪ್ರಯುಕ್ತ ಬಿದರಮ್ಮ ದೇವಿಗೆ ವಿಶೇಷ ಅಲಂಕಾರವನ್ನು ನೆರವೇರಿಸಲಾಯಿತು. ಜಾತ್ರಾ ಮಹೋತ್ಸವ ಅಂಗವಾಗಿ ಶನಿವಾರ ಸಂಜೆ ಉಯ್ಯಾಲೆ ಭಾನುವಾರ ಬೆಳಗ್ಗೆ 6 ರಿಂದ 7 ಗಂಟೆಗೆ ಸಿಡಿ ಉತ್ಸವ, ಮಧ್ಯಾಹ್ನ 12 ಗಂಟೆಗೆ ಮಹಾರಥೋತ್ಸವ ಕಾರ್ಯಕ್ರಮ ನಡೆಯಲಿದೆ.

## ಕಗ್ಗಿನಹಳ್ಳಿ ಶ್ರೀ ಗಂಗಾಭವಾನಿ ದೇವಿಗೆ ವಿಶೇಷ ಪೂಜೆ

ಬೇತಮಂಗಲ: ಗ್ರಾಮದ ಸಮೀಪದ ಕಗ್ಗಿನಹಳ್ಳಿ ಗ್ರಾಮದ ಶ್ರೀ ಗಂಗಾಭವಾನಿ ದೇವಿಯ ಜಾತ್ರ ಮಹೋತ್ಸವ ಅಂಗವಾಗಿ ಸುಮಾರು 508 ಬಿಂದಿಗೆಗಳ ಹಾಲಿನ ಅಭಿಷೇಕ ಮಾಡಲಾಯಿತು.

ಕಗ್ಗಿನಹಳ್ಳಿ, ಅಡಂಪಲ್ಲಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಿಂದ ಭಕ್ತರು ಹಾಲಿನ ಬಿಂದಿಗೆಗಳನ್ನು ಹೊತ್ತು ತಂದು ಗಂಗಾಭವಾನಿ ತಾಯಿಗೆ ಅರ್ಪಿಸುವ ಮೂಲಕ ಹರಕೆ ಪೂರೈಸಿದರು.

ಮಕ್ಕಳು ಹಾಗೂ ನಾಟಕ ಕಲಾ ತಂಡದಿಂದ ಕೋಲಾಟವನ್ನು ಪ್ರದರ್ಶಿಸಿದರು, ದೇವಾಲಯಕ್ಕೆ ಭೇಟಿ ನೀಡಿದ ಭಕ್ತರಿಗೆ ಪ್ರಸಾದ ವಿನಿಯೋಗ ಮಾಡಲಾಯಿತು.



ಮಾಜಿ ಶಾಸಕ ವೈ.ಸಂಪಂಗಿ, ಬಿಜೆಪಿ ಗ್ರಾಮಾಂತರ ಅಧ್ಯಕ್ಷ ಲಕ್ಷ್ಮೀನಾರಾಯಣ್, ಕಮ್ಮಸಂದ್ರ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ನಾಗರಾಜ್, ಮುಖಂಡರಾದ ನಾರಾಯಣಪ್ಪ, ರಾಮಕೃಷ್ಣ ರೆಡ್ಡಿ, ಅರುಣ್ ಸೇರಿದಂತೆ ನೂರಾರೂ ಮಂದಿ ಭಕ್ತರು ಭಾಗವಹಿಸಿ ದೇವಿಯ ಅಶಿರ್ವಾದ ಪಡೆದರು.

## ಮಾಲವಿ ಜಲಾಶಯದ ಗೇಟ್ ರೀಪೇರಿಗೆ ಒತ್ತಾಯ

ಹಗರಿಬೊಮ್ಮನಹಳ್ಳಿ : ತಾಲ್ಲೂಕಿನ ಜೀವನಾಡಿ ಮಾಲವಿ ಜಲಾಶಯದ ಕ್ರಸ್ಟ್ ಗೇಟ್ ರಿಪೇರಿ ಮಾಡುವಂತೆ ಒತ್ತಾಯಿಸಿ ರೈತ ಸಂಘ ಹಾಗೂ ಸಹಮತ ವೇದಿಕೆ ವತಿಯಿಂದ ನೀರಾವರಿ ಅಧಿಕಾರಿಗಳಿಗೆ ಶುಕ್ರವಾರ ಮನವಿ ಸಲ್ಲಿಸಲಾಯಿತು.

ಹೊಸಪೇಟೆಯ ಮುನಿರಾಬಾದ್ ನ ನೀರಾವರಿ ಇಲಾಖೆಯ ಕಾರ್ಯಪಾಲಕ ಅಭಿಯಂತರವರು ಕಚೇರಿಗೆ ತೆರಳಿ ಮಾಲವಿ ಜಲಾಶಯದ ಗೇಟ್ ರಿಪೇರಿ ಮಾಡಿಸುವಂತೆ ಒತ್ತಾಯಿಸಿ ಮನವಿ ಪತ್ರ ನೀಡಿದ ಬಳಿಕ ಸಹಮತ ವೇದಿಕೆಯ ಅಧ್ಯಕ್ಷ ಜಿ.ಲಕ್ಷ್ಮೀಪತಿ ಮಾತನಾಡಿ ಹಿಂದಿನ ಸರ್ಕಾರದ ಅವಧಿಯಲ್ಲಿ ಕುಡಿಯುವ ನೀರಿನ ಸಲುವಾಗಿ ಮಾಲವಿ ಜಲಾಶಯಕ್ಕೆ ತುಂಗಭದ್ರ ನದಿಯಿಂದ ಶಾಶ್ವತ ನೀರೋದಗಿಸುವ ಸಲುವಾಗಿ 163 ಕೋಟಿ ರೂಪಾಯಿಗಳನ್ನು ಮಂಜೂರು ಮಾಡಿದ್ದರಿಂದ ಯೋಜನೆ ಕಾರ್ಯರೂಪಕ್ಕೆ ಬಂದಿದೆ. ಅದೇ ವರ್ಷವೂ ಮಳೆಯೂ ಚೆನ್ನಾಗಿ ಬಂದು ಹಾಗೂ ತುಂಗಭದ್ರಾ ನದಿಯಿಂದ ನೀರು ಸರಬರಾಜು ಕೂಡ ಆಗಿ ಜಲಾಶಯ ಸಂಪೂರ್ಣವಾಗಿ ಭರ್ತಿಯಾಗಿತ್ತು.

ಆದರೆ ಗೇಟನಲ್ಲಿ ನೀರು ಸೋರಿಕೆ ಉಂಟಾಗಿ ಕೆಲವೇ



ದಿನಗಳಲ್ಲಿ ಜಲಾಶಯ ಖಾಲಿಯಾಯಿತು. ಇದರಿಂದ ಸರ್ಕಾರದ ಮಹತ್ವಾಕಾಂಕ್ಷೆಯ ಕುಡಿಯುವ ನೀರಿನ ಯೋಜನೆ ಸದುಪಯೋಗವಾಗಲಿಲ್ಲ ಅದ್ದರಿಂದ ಗೇಟ ರಿಪೇರಿ ಮಾಡದ ಹೊರತು ನೀರು ಸಂಗ್ರಹ ಅಸಾಧ್ಯವಾಗಿದೆ ಗೇಟ್ ರಿಪೇರಿ ಕಾರ್ಯ ಬೇಗ ಮಾಡಬೇಕು ಎಂದು ಒತ್ತಾಯಿಸಿದರು.

ರಾಜ್ಯ ರೈತ ಸಂಘದ ಕಲ್ಯಾಣ ಕರ್ನಾಟಕ ವಿಭಾಗೀಯ ಕಾರ್ಯದರ್ಶಿ ಬಿ.ಗೋಣಿಬಸಪ್ಪ ಮಾತನಾಡಿ ಇದೀಗ ಮುಂಗಾರು ಪ್ರಾರಂಭವಾಗಿ ಅಲ್ಲಲ್ಲಿ ಮಳೆಯಾಗುತ್ತಿದೆ.

ಜಲಾಶಯದಲ್ಲಿ ಸಂಗ್ರಹವಾಗುತ್ತಿರುವ ನೀರು ಗೇಟುಗಳ ಮುಖಾಂತರ ಸೋರಿಕೆಯಾಗುತ್ತಿದೆ.

ಸತತ 2 ವರ್ಷಗಳಿಂದ ಈ ಬಗ್ಗೆ ಮನವಿ ನೀಡುತ್ತಾ ಬಂದರೂ ಯಾವುದೇ ಪ್ರಯೋಜನವಾಗುತ್ತಿಲ್ಲ, ಈ ಬಾರಿಯಾದರೂ ರಿಪೇರಿ ಮಾಡಲೇಬೇಕು ಇಲ್ಲವಾದರೆ ಮುಂದಿನ ದಿನಗಳಲ್ಲಿ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗುವುದು ಎಂದರು.

ನೀರಾವರಿ ಇಲಾಖೆಯ ತಾಂತ್ರಿಕ ವಿಭಾಗದ ಲತಾ ಹಿರೇಮಠ ಮನವಿ ಸ್ವೀಕರಿಸಿ ಮಾತನಾಡಿ ಕ್ರಸ್ಟ್ ಗೇಟ್ ಗಳ ರಿಪೇರಿಗೆ ನಾಲ್ಕು ಕೋಟಿ ರೂಪಾಯಿಗಳು ಮಂಜೂರು ಆಗಿತ್ತು, ಒಂದು ಸಾರಿ ಟೆಂಡರ್ ಪ್ರಕ್ರಿಯೆ ಆಗಿದ್ದು, ಕಾರಣಾಂತರದಿಂದ ಅದು ಹಾಗೆ ಉಳಿದಿದ್ದು, ಮತ್ತೊಂದು ಬಾರಿ ಜೂನ್ ತಿಂಗಳಲ್ಲಿ ಟೆಂಡರ್ ಕರೆಯಲಾಗುವುದು ಎಂದು ತಿಳಿಸಿದರು.

ಸಹಮತ ವೇದಿಕೆಯ ಉಪಾಧ್ಯಕ್ಷ ನೀಲಕಂಠಪ್ಪ, ರೈತ ಸಂಘದ ತಾಲೂಕು ಕಾರ್ಯದರ್ಶಿ ತಂಬ್ರಹಳ್ಳಿ ರವಿಕುಮಾರ್ ಇತರರು ಇದ್ದರು.

MUNJANEVARTHE KANNADA DAILY, EDITOR, PRINTER PUBLISHED And OWNED BY H.L.Amaranth, and Printed at: Sree Manjunatha enterprises, No.30Subbannachan Lane 1st Cross, Cottenpet Bangalore-560053, MOB: **91414 14119** Published at: No.97, 2nd Cross, Vivekananda Nagar, Khadi commision layout, BSK 3rd Stage, Katharaguppe Main Road, Bangalore 560085